# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 264
Volume - 01 Issue - 264

ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269

ಚಿತ್ರದುರ್ಗ
Chitradurga

ದಿನಾಂಕ: 10–05–2024 ಶುಕ್ರವಾರ
Date: 10-05-2024 Friday

ಪುಟ: 4
Page: 4

ಬೆಲೆ : ರೂ.2–00
Price: Rs. 2-00



ಒಳಪುಟದ ಸುದ್ದಿಗಳು

ಮುಂಗಾರು ಪ್ರಕೃತಿ ವಿಕೋಪ ನಿಯಂತ್ರಣ ಕ್ರಮಕ್ಕೆ ಅಧಿಕಾರಿಗಳಿಗೆ ಸೂಚನೆ: ಡಿಸಿ 2

ಭಕ್ತಿ, ಆವೇಶದ ನಡುವೆ ಹೊಸದುರ್ಗ ದುರ್ಗಮ್ಮ ಅದ್ದೂರಿ ಸಿಡಿಬಂಡಿ ಉತ್ಸವ 3

ಮಾಡೋದಾದ್ರೆ ಫೈನಾನ್ಸ್‌ನಲ್ಲಿ ಮಾಡುವುದು ಹೆಚ್ಚು ಲಾಭಕರವಂತೆ, ಏಕೆ ಗೊತ್ತೇ? 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಎಸ್ಸೆಸ್ಸೆಲ್ಸಿ: ಜಿಲ್ಲೆಗೆ ಶೇ.72.85 ರಷ್ಟು ಫಲಿತಾಂಶ

» **ಚಿತ್ರದುರ್ಗ**

2023–24ನೇ ಸಾಲಿನ ಎಸ್‌ಎಸ್ ಎಲ್‌ಸಿ ಪರೀಕ್ಷೆಯಲ್ಲಿ ಚಿತ್ರದುರ್ಗ ಜಿಲ್ಲೆಗೆ ಶೇ.72.85 ಫಲಿತಾಂಶ ಲಭಿಸಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಹಾಜರಾದ 22,275 ವಿದ್ಯಾರ್ಥಿಗಳಲ್ಲಿ 16,227 ವಿದ್ಯಾರ್ಥಿಗಳು ತೇರ್ಗಡೆಯಾಗುವ ಮೂಲಕ ಶೇ.72.85 ಫಲಿತಾಂಶದೊಂದಿಗೆ ಚಿತ್ರದುರ್ಗ ಜಿಲ್ಲೆಯು 21ನೇ ಸ್ಥಾನ ಪಡೆದುಕೊಂಡಿದೆ. 11107 ಬಾಲಕರು, 11168 ಬಾಲಕಿಯರು ಸೇರಿದಂತೆ ಒಟ್ಟು 22, 275 ವಿದ್ಯಾರ್ಥಿಗಳು ಪರೀಕ್ಷೆ ಹಾಜರಾಗಿದ್ದರು. ಈ ಪೈಕಿ 7207 ಬಾಲಕರು, 9020 ಬಾಲಕಿಯರು ಸೇರಿದಂತೆ ಒಟ್ಟು 16,227 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಒಟ್ಟು ಪಲಿತಾಂಶದಲ್ಲಿ ಬಾಲಕಿಯರು ಮೇಲುಗೈ ಸಾಧಿಸಿದ್ದು, ಚಿತ್ರದುರ್ಗ ಜಿಲ್ಲೆಯು ಈ ಬಾರಿ ರಾಜ್ಯದ ಜಿಲ್ಲೆಗಳ ಪೈಕಿ 21ನೇ ಸ್ಥಾನ ಪಡೆದಿದೆ.

ಚಳ್ಳಕೆರೆ ತಾಲ್ಲೂಕಿನಲ್ಲಿ 1753 ಬಾಲಕರು, 1932 ಬಾಲಕಿಯರು ಸೇರಿದಂತೆ ಒಟ್ಟು 3685 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಚಿತ್ರದುರ್ಗ ತಾಲ್ಲೂಕಿನಲ್ಲಿ 1830 ಬಾಲಕರು, 2349 ಬಾಲಕಿಯರು ಸೇರಿದಂತೆ ಒಟ್ಟು 4179 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಹಿರಿಯೂರು ತಾಲ್ಲೂಕಿನಲ್ಲಿ 1140 ಬಾಲಕರು, 1496 ಬಾಲಕಿಯರು ಸೇರಿದಂತೆ ಒಟ್ಟು 2636 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಹೊಳಲ್ಕೆರೆ ತಾಲ್ಲೂಕಿನಲ್ಲಿ 900 ಬಾಲಕರು, 1174 ಬಾಲಕಿಯರು ಸೇರಿದಂತೆ ಒಟ್ಟು 2074 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಹೊಸದುರ್ಗ ತಾಲ್ಲೂಕಿನಲ್ಲಿ 917 ಬಾಲಕರು, 1231 ಬಾಲಕಿಯರು ಸೇರಿದಂತೆ ಒಟ್ಟು 2148 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಮೊಳಕಾಲ್ಮುರು ತಾಲ್ಲೂಕಿನಲ್ಲಿ 667 ಬಾಲಕರು, 838 ಬಾಲಕಿಯರು ಸೇರಿದಂತೆ 1505 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.



**ಎಸ್.ಎಸ್.ಎಲ್.ಸಿ ಪರಿಕ್ಷೆಯಲ್ಲಿ 625 ಅಂಕಗಳಿಗೆ 625 ಅಂಕ ಪಡೆದು ರಾಜ್ಯಕ್ಕೆ ಪ್ರಥಮಸ್ಥಾನಗಳಿಸಿ ಬಾಗಲಕೋಟೆ ಜಿಲ್ಲೆಗೆ ಕೀರ್ತಿ ತಂದಿರುವ ಮುಧೋಳ ತಾಲೂಕಿನ ಮೆಳ್ಳಿಗೇರಿ ಗ್ರಾಮದ ಮುರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿ ಅಂಕಿತಾಳನ್ನು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಹಾಗೂ ಮಾಜಿ ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ ಅವರು ಸನ್ಮಾನಿಸಿ ಅಭಿನಂದಿಸಿದರು**

**ಹೊಳಲ್ಕೆರೆ ಫಸ್ಟ್:** ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶದಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ಹೊಳಲ್ಕೆರೆ ತಾಲ್ಲೂಕು ಶೇ.81.21 ಫಲಿತಾಂಶ ಪಡೆಯುವ ಮೂಲಕ ಮೊದಲ ಸ್ಥಾನಗಳಿಸಿದೆ. ಉಳಿದಂತೆ ಚಿತ್ರದುರ್ಗ ಶೇ.68.27, ಹಿರಿಯೂರು–75.04, ಹೊಸದುರ್ಗ–70.06, ಮೊಳಕಾಲ್ಮುರು ತಾಲ್ಲೂಕು ಶೇ.71.91ರಷ್ಟು ಫಲಿತಾಂಶ ಪಡೆದಿದೆ.

**ಗ್ರಾಮೀಣವಿದ್ಯಾರ್ಥಿಗಳಮೇಲುಗೈ:**ಚಿತ್ರದುರ್ಗ ಜಿಲ್ಲೆಯ ಗ್ರಾಮೀಣ ಪ್ರದೇಶ ವಿದ್ಯಾರ್ಥಿಗಳು ಈ ಬಾರಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ತೋರಿ ಮೇಲುಗೈ ಸಾಧಿಸಿದ್ದಾರೆ. ಒಟ್ಟು 15927 ಗ್ರಾಮೀಣ ವಿದ್ಯಾರ್ಥಿಗಳು ಪರೀಕ್ಷೆ ಹಾಜರಾಗಿದ್ದು, ಈ ಪೈಕಿ 11900 ವಿದ್ಯಾರ್ಥಿಗಳು ಉತ್ತೀರ್ಣರಾಗುವುದರೊಂದಿಗೆ ಶೇ.74.71 ರಷ್ಟು ಉತ್ತೀರ್ಣತೆಯ ಸಾಧನೆ ಮೆರೆದಿದ್ದಾರೆ.

ನಗರ ಪ್ರದೇಶದಲ್ಲಿ 6348 ವಿದ್ಯಾರ್ಥಿ ಪರೀಕ್ಷೆ ಬರೆದಿದ್ದು, 4327 ವಿದ್ಯಾರ್ಥಿಗಳು ಉತ್ತೀರ್ಣರಾಗುವುದರೊಂದಿಗೆ ಶೇ.68.16 ರಷ್ಟು ಸಾಧನೆ ತೋರಿದ್ದಾರೆ.

ಜಿಲ್ಲೆಯ 157 ಸರ್ಕಾರಿ ಶಾಲೆಯ 8377 ವಿದ್ಯಾರ್ಥಿಗಳ ಪೈಕಿ 6174 ವಿದ್ಯಾರ್ಥಿಗಳು, 180 ಅನುದಾನಿತ ಶಾಲೆಗಳ 8860 ವಿದ್ಯಾರ್ಥಿಗಳ ಪೈಕಿ 5866 ವಿದ್ಯಾರ್ಥಿಗಳು, 137 ಅನುದಾನರಹಿತ ಶಾಲೆಗಳ 5038 ವಿದ್ಯಾರ್ಥಿಗಳ ಪೈಕಿ 4187 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

**ಜಿಲ್ಲೆಯಲ್ಲಿ 14 ವಿದ್ಯಾರ್ಥಿಗಳು ಟಾಪರ್ಸ್:** ಈ ಬಾರಿಯ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಜಿಲ್ಲೆಯ 14 ವಿದ್ಯಾರ್ಥಿಗಳು ಟಾಪರ್‌ಗಳಾಗಿದ್ದಾರೆ.

ಚಿತ್ರದುರ್ಗ ನಗರದ ವಿದ್ಯಾವಿಕಾಸ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿ ಅಭಯ್.ಸಿ.ಐ, ಹಿರಿಯೂರಿನ ರಾಷ್ಟ್ರೀಯ ಅಕಾಡೆಮಿ ಇಂಗ್ಲೀಷ್ ಶಾಲೆಯ ಹಿರಣ್ಮಯ್ಯೆ.ಎಂ.ಎಸ್, ತನುಶ್ರೀ.ಟಿ. ಮೊಳಕಾಲ್ಮೂರಿನ ಸರ್.ಎಂ.ವಿ ಆಂಗ್ಲ ಮಾಧ್ಯಮ ಶಾಲೆಯ ಅಸರ್ ಮಹೀನ್.ಎಂ 625 ಅಂಕಗಳಿಗೆ 620 ಅಂಕ ಗಳಿಸಿದ್ದಾರೆ.

ಚಿತ್ರದುರ್ಗ ನಗರದ ಡಾನ್ ಬಾಸ್ಕೋ ಶಾಲೆಯ ಭುವನೇಶ್ವರಿ ಜಿ.ಎಸ್. ಹಿರಿಯೂರಿನ ರಾಷ್ಟ್ರೀಯ ಅಕಾಡೆಮಿ ಇಂಗ್ಲೀಷ್ ಶಾಲೆಯ ಪೂಜಿತಾ.ಎಸ್, ಶ್ರೀ ಮೋಕ್ಷಗುಂಡಂ ವಿಶ್ವೇಶ್ವರಯ್ಯ ಶಾಲೆಯ ಎಸ್.ಪ್ರೀತಿ, ಹೊಳಲ್ಕೆರೆಯ ಎಸ್.ಜೆ.ಎಂ.ಇಂಗ್ಲೀಷ್ ಮೀಡಿಯಂ ಶಾಲೆಯ ನಂದನ್.ಸಿ.ಕೆ 625 ಅಂಕಗಳಿಗೆ 618 ಅಂಕ ಗಳಿಸಿದ್ದಾರೆ.

ಚಿತ್ರದುರ್ಗ ನಗರದ ವಿದ್ಯಾ ವಿಕಾಸ ಆಂಗ್ಲ ಮಾಧ್ಯಮ ಶಾಲೆಯ ಅಭಿನವ್.ಕೆ.ಆರ್, ಭರಮಸಾಗರದ ಡಿ.ವಿ.ಎಸ್ ಇಂಗ್ಲೀಷ್ ಮೀಡಯಂ ಶಾಲೆಯ ಭಾವನ.ಹೆಚ್.ಎಂ, ಹಿರಿಯೂರು ತಾಲ್ಲೂಕಿನ ರಾಷ್ಟ್ರೀಯ ಅಕಾಡೆಮಿ ಶಾಲೆಯ ಸೃಜನ್ ಸಾಗರ್ ಆರ್.ಕೆ., ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಯ ನವ್ಯಶ್ರೀ.ಆರ್. ಮೊರಾರ್ಜಿ ದೇಸಾಯಿ ಶಾಲೆಯ ಸಂಜಯ್.ಎಸ್ ಹಾಗೂ ಹಿರಿಯೂರು ನಗರದ ಪ್ರೆಸಿಡೆನ್ಸಿ ಇಂಗ್ಲೀಷ್ ಶಾಲೆಯ ಮನೋಜ್ಞ.ಜಿ.ಪಿ 625 ಅಂಕಗಳಿಗೆ 616 ಅಂಕ ಗಳಿಸಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಎಂ.ನಾಸಿರುದ್ದೀನ್ ತಿಳಿಸಿದ್ದಾರೆ.

## ಕಡ್ಲೆ ಗುದ್ದು ಪ್ರೌಢಶಾಲೆಗೆ ಶೇಕಡ 95.12 ರಷ್ಟು ಫಲಿತಾಂಶ

ಸಿರಿಗೆರೆ ಸಮೀಪದ ಕಡ್ಲೆಗುದ್ದು ಗ್ರಾಮದ ಶ್ರೀ ಆಂಜನೇಯ ಸ್ವಾಮಿ ಪ್ರೌಢಶಾಲೆಯು 10ನೇ ತರಗತಿ ಫಲಿತಾಂಶದಲ್ಲಿ ಶೇಕಡಾ 95 ರಷ್ಟು ಫಲಿತಾಂಶವನ್ನು ಗಳಿಸಿದೆ. ಪರೀಕ್ಷೆಗೆ ಹಾಜರಾದ ಒಟ್ಟು 41 ವಿದ್ಯಾರ್ಥಿಗಳಲ್ಲಿ 39 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.ಅತ್ಯುತ್ತಮ ಶ್ರೇಣಿ 02 ಪ್ರಥಮ ಶ್ರೇಣಿ, 22 ದ್ವಿತೀಯ ಶ್ರೇಣಿ 11, ತೃತೀಯ ಶ್ರೇಣಿಯಲ್ಲಿ 04 ವಿದ್ಯಾರ್ಥಿಗಳು ಗಳಿಸಿದ್ದಾರೆ ಪ್ರಜ್ವಲ್ 558 ಅಂಕಗಳಿಸಿ ಪ್ರಥಮ ಸ್ಥಾನ ನರಸಿಂಹ ಮೂರ್ತಿ 550 ದ್ವಿತೀಯ ಸ್ಥಾನ ಓಬಳೇಶ್ 530 ಅಂಕಗಳಿಸಿ ತೃತೀಯ ಸ್ಥಾನ ಪಡೆದಿದ್ದಾರೆ. ಉತ್ತಮ ಫಲಿತಾಂಶ ತಂದುಕೊಟ್ಟ ವಿದ್ಯಾರ್ಥಿಗಳಿಗೆ ಶಾಲೆ ಆಡಳಿತ ಮಂಡಳಿ ಹಾಗೂ ಮುಖ್ಯ ಶಿಕ್ಷಕರು ಹಾಗೂ ಶಿಕ್ಷಕರು ಗ್ರಾಮಸ್ಥರು ಪೋಷಕರು ಅಭಿನಂದಿಸಿದ್ದಾರೆ.




## ದೇವರಕೊಟ್ಟ ಏಕಲವ್ಯ ಮಾದರಿ ಶಾಲೆಗೆ ಶೇ100 ರಷ್ಟು ಫಲಿತಾಂಶ




**ಹಿರಿಯೂರು:** ಹಿರಿಯೂರು ತಾಲೂಕಿನ ದೇವರಕೊಟ್ಟ [ಖಖಿ–601] ಏಕಲವ್ಯ ಮಾದರಿ ವಸತಿ ಶಾಲೆಗೆ 10 ನೇ ತರಗತಿಯಲ್ಲಿ ಶೇಕಡಾ. 100 ರಷ್ಟು ಫಲಿತಾಂಶ ಪಡೆದಿದ್ದಾರೆ. ಹಾಜರಾದ ಬಾಲಕರು: 28. ಹಾಜರಾದ ಬಾಲಕಿಯರು: 28. ಒಟ್ಟು ಉತ್ತೀರ್ಣ ವಿದ್ಯಾರ್ಥಿಗಳ ಸಂಖ್ಯೆ: 56

**ವಿದ್ಯಾರ್ಥಿವಾರು ಗ್ರೇಡ್‌ವೈಸ್ ಫಲಿತಾಂಶ:** A+ : 11, A :16, B+ :17, B :10, C+ :2, C :0 **ಶಾಲೆಯ ಗುಣಾತ್ಮಕ ಫಲಿತಾಂಶ : 90.79**

**ಶಾಲಾ ದರ್ಜೆ:** ಎಈ ಸಾಧನೆಗೆ ನಮಗೆ ಮಾರ್ಗದರ್ಶನ ನೀಡಿದ ಇಲಾಖೆ ಅಧಿಕಾರಿಗಳಿಗೆ, ಶಿಕ್ಷಕ ವೃಂದದವರಿಗೆ, ವಿದ್ಯಾರ್ಥಿಗಳಿಗೆ, ಪೋಷಕ ವರ್ಗದವರಿಗೆ ಹಾಗೂ ಶಾಲೆಯ ಎಲ್ಲಾ ಸಿಬ್ಬಂದಿ ವರ್ಗದವರಿಗೆ ಪ್ರಾಂಶುಪಾಲರು ಹೃದಯಪೂರ್ವಕ ಧನ್ಯವಾದಗಳು ತಿಳಿಸಿದ್ದಾರೆ.

## ಎಸ್‌ಎಸ್‌ಎಲ್‌ಸಿ: ಚಳ್ಳಕೆರೆ ತಾಲ್ಲೂಕಿಗೆ ಶೇ.75.54 ಸಾಧನೆ

» **ಚಳ್ಳಕೆರೆ**

ಪ್ರಸ್ತುತ 2024ರ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಪ್ರಕಟಗೊಂಡು ತಾಲ್ಲೂಕಿನಾದ್ಯಂತ ಉತ್ತಮ ಫಲಿತಾಂಶ ಲಭ್ಯವಾಗಿದೆ. ಸರಾಸರಿ ಶೇ. 75.54ರಷ್ಟು ಫಲಿತಾಂಶ ದಾಖಲಿಸಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದ್ದಾರೆ.



ಅವರು, ಈ ಬಗ್ಗೆ ಮಾಹಿತಿ ನೀಡಿ ಪ್ರಸ್ತುತ ವರ್ಷದ ಎಸ್‌ಎಸ್‌ಎಲ್‌ಸಿ ಫಲಿತಾಂಶ ನಿರೀಕ್ಷೆಗಿಂತ ಕಡಿಮೆಯಾದರೂ ಉತ್ಸಾಹವನ್ನು ತುಂಬುವ ಫಲಿತಾಂಶವಾಗಿದೆ. ತಾಲ್ಲೂಕಿನಾದ್ಯಂತ ಒಟ್ಟು 7 ಪ್ರೌಢಶಾಲೆ ಶೇ.100ರ ಫಲಿತಾಂಶ ದಾಖಲಿಸಿವೆ. ಮೂರು ಸರ್ಕಾರಿ ಪ್ರೌಢಶಾಲೆಗಳು, ಅನುದಾನ ರಹಿತ ನಾಲ್ಕು ಪ್ರೌಢಶಾಲೆಗಳು ಶೇ.100ರ ಫಲಿತಾಂಶ ದಾಖಲಿಸಿವೆ, ಅನುದಾನಿತ ಯಾವುದೇ ಪ್ರೌಢಶಾಲೆ ಶೇ.100 ಫಲಿತಾಂಶ ದಾಖಲಿಸಿಲ್ಲ. ನಗರಂಗೆರೆ ಗ್ರಾಮ ಪಂಚಾಯಿತಿಯ ಆದರ್ಶ ಪ್ರೌಢಶಾಲೆ, ಕಲಮರಹಳ್ಳಿ ಸರ್ಕಾರಿ ಪ್ರೌಢಶಾಲೆ ಹಾಗೂ ಕೊರ್ಲಕುಂಟೆ ಸರ್ಕಾರಿ ಪ್ರೌಢಶಾಲೆ.


ಪುಟ 2


**ಫಾಸ್ಟ್ ನ್ಯೂಸ್**

## ಡಿಪ್ಲೋಮಾ ಪ್ರವೇಶಾತಿ ಪ್ರಕ್ರಿಯೆ ಆರಂಭ

» **ಚಿತ್ರದುರ್ಗ**

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ವ್ಯಾಪ್ತಿಯ ರಾಜ್ಯದ 30 ಸರ್ಕಾರಿ ಪಾಲಿಟೆಕ್ನಿಕ್ ಹಾಗೂ 10 ಖಾಸಗಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ 2024–25ನೇ ಸಾಲಿನ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶಾತಿ ಪ್ರಕ್ರಿಯೆ ಆರಂಭವಾಗಿದೆ. ಪ್ರವೇಶ ಸ್ಥಾನಗಳನ್ನು ರಾಜ್ಯಮಟ್ಟದ ನಾನ್ ಇಂಟರ್ ಆಕ್ಟೀವ್ ಕೌನ್ಸಿಲಿಂಗ್ ಮೂಲಕ ಭರ್ತಿ ಮಾಡಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಮೇ.9 ರಿಂದ 21 ರವರೆಗೆ ತಿತಿತಿ.ಜಣಜಇ. ಇಚಿಡಿಟಿಚಿಣಚಿಞಚಿ.ರಿಠತಿ.ಟಿವೆಬ್‌ಸೈಟ್‌ಮೂಲಕ ಅರ್ಜಿಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕು. ಭರ್ತಿ ಮಾಡಿದ ಅರ್ಜಿಗಳನ್ನು ಮೇ.21ರ ಸಂಜೆ 5:30ರ ಒಳಗೆ ಅಗತ್ಯ ಪೂರಕ ದಾಖಲೆಗಳೊಂದಿಗೆ, ಡಿಪ್ಲೋಮಾ ಕಾಲೇಜಿನ ಕಂಪ್ಯೂಟರ್ ವಿಭಾಗದಲ್ಲಿ ಸಲ್ಲಿಸಿ, ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ದಾಖಲಿಸಿಕೊಂಡು, ಕೋರ್ಸುಗಳ ಆದ್ಯತಾ ಪಟ್ಟಿಯ ಸ್ವೀಕೃತಿ ಪಡೆಯಬೇಕು. ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಮೆರಿಟ್‌ಪಟ್ಟಿಯನ್ನು ಅಭ್ಯರ್ಥಿಗಳ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್ ಮೂಲಕ ರವಾನಿಸಲಾಗುವುದು ಹಾಗೂ ಇಲಾಖೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಮೇ.22 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಮೆರಿಟ್ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಬಹುದು. ಮೇ.23 ರಂದು ಸಂಜೆ 5:30 ಅಂತಿಮ ಮೆರಿಟ್ ಪಟ್ಟಿ ಪಕ್ರಟಿಸಲಾಗುವುದು. ಮೇ.27 ರಂದು ಸಂಜೆ 6 ಗಂಟೆಯ ನಂತರ ಸೀಟು ಹಂಚಿಕೆ ಮಾಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ಮೇ.28 ಹಾಗೂ ಮೇ.29 ರಂದು ನಿಗದಿತ ಶುಲ್ಕದೊಂದಿಗೆ ಸಂಬಂಧ ಪಟ್ಟ ಕಾಲೇಜಿಗಳಲ್ಲಿ ಪ್ರವೇಶ ಪಡೆಯಬಹುದಾಗಿದೆ. ಆನ್‌ಲೈನ್ ಮೂಲಕ ಸೀಟು ಹಂಚಿಕೆ ಆಗದೆ ಉಳಿದ ಸೀಟುಗಳ ಭರ್ತಿಗಾಗಿ ಮೇ.30 ರಿಂದ ಜೂನ್ 6 ರವರೆಗೆ ಆಯಾ ಕಾಲೇಜು ಪ್ರಾಂಶುಪಾಲರ ಹಂತದಲ್ಲಿಯೇ ರೋಷ್ಟರ ಅನುಗುಣವಾಗಿ ಸೀಟು ಹಂಚಿಕೆ ಮಾಡಲಾಗುವುದು. ಡಿಪ್ಲೋವಾ ಪ್ರವೇಶ ಪ್ರಕ್ರಿಯೆಗೆ ಸಂಬಂಧಿಸಿದ ಎಲ್ಲಾ ಮಾಹಿಗಳು ಹಾಗೂ ಇ–ಪುಸ್ತಕವನ್ನು www.dtek.karnatak.gov.in ಅಥವಾ dtetech.karnataka.gov.in/kartechnical ವೆಬ್‌ಸೈಟ್ ಮೂಲಕ ಪಡೆದುಕೊಳ್ಳಬಹುದು. ಆಯಾ ಸಂಸ್ಥೆಯ ಸೂಚನಾ ಫಲಕದಲ್ಲಿ ಕೂಡ ಮಾಹಿತಿಗಳನ್ನು ಲಗತ್ತಿಸಲಾಗುತ್ತದೆ.

## ನಗರಸಭೆ ಆಸ್ತಿ ಅತಿಕ್ರಮಣ ಅಪರಾಧ: ಅನಧಿಕೃತ ನಿರ್ಮಾಣ ತೆರವು

» **ಚಿತ್ರದುರ್ಗ**

ನಗರ ಸಭೆಯ ರಸ್ತೆ, ಚರಂಡಿ ಹಾಗೂ ಖಾಲಿ ಜಾಗಗಳನ್ನು ಒತ್ತುವರಿ ಮಾಡಿ ತಾತ್ಕಾಲಿಕ ಶೆಡ್,ಕಟ್ಟಡ, ಕಾಂಪೌಂಡ್, ನೀರಿನ ಸಂಪುಗಳನ್ನು ನಿರ್ಮಾಣ ಮಾಡುವುದು ಅಪರಾಧವಾಗಿದೆ. ಸಾರ್ವಜನಿಕರು ನಿಯಮ ಬಾಹಿರವಾಗಿ ಅನಧಿಕೃತ ನಿರ್ಮಾಣ ಮಾಡಿದರೆ, ನಗರ ಸಭೆಯಿಂದ ತೆರವು ಮಾಡುವುದಾಗಿ ಪೌರಾಯುಕ್ತೆ ಎಂ.ರೇಣುಕಾ ಎಚ್ಚರಿಸಿದ್ದಾರೆ. ನಗರದ ಕೆ.ಹೆಚ್.ಬಿ ಕಾಲೋನಿ ಹಾಗೂ ಬಿ.ಎಲ್.ಗೌಡ ಲೇಔಟ್‌ನಲ್ಲಿ ನಗರ ಸಭೆ ಜಾಗದಲ್ಲಿ ನಿರ್ಮಿಸಿದ್ದ ಅನಧಿಕೃತ ಕಟ್ಟಗಳನ್ನು ಮೇ.8 ರಂದು ಕಾರ್ಯಾಚರಣೆ ನಡೆಸಿ ತೆರವುಗೊಳಿಸಲಾಗಿದೆ. ನಗರಸಭೆಯ ಜಾಗ, ರಸ್ತೆ, ಚರಂಡಿ, ಉದ್ಯಾನವಗಳು ಸಾರ್ವಜನಿಕರ ಅನೂಕೂಲಕ್ಕಾಗಿ ಬಳಸಲಾಗುತ್ತದೆ. ಇವುಗಳನ್ನು ಕಾಪಾಡಿಕೊಳ್ಳಬೇಕಾದುದು ನಮ್ಮೆಲ್ಲರ ಕರ್ತವ್ಯವಾಗಿದೆ. ನಗರ ಸಭೆಯಿಂದ ಕಟ್ಟಡ ನಕ್ಷೆ ಅನುಮೋದನೆ ಪಡೆಯದೇ ಅನಧಿಕೃತವಾಗಿ ಕಟ್ಟಡ ನಿರ್ಮಾಣ ಮಾಡಿದರೆ ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ಕಲಂ 187(ಎ)(ಸಿ)ರಂತೆ ದಂಡ ವಿಧಿಸಿ, ಕಾನೂನು ರೀತ್ಯಾ ಕ್ರಮಕೈಗೊಳ್ಳಲಾಗುವುದು.

**ಪ್ರಮುಖ ಸುದ್ದಿ**

# ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಅಧಿಸೂಚನೆ ಪ್ರಕಟ

» **ಚಿತ್ರದುರ್ಗ**

: ಜೂನ್ 21ರಂದು ವಿಧಾನ ಪರಿಷತ್ ಸದಸ್ಯ ಡಾ.ವೈ.ಎ.ನಾರಾಯಣಸ್ವಾಮಿ ಅವರ ನಿವೃತ್ತಿಯಿಂದ ತೆರವಾಗಲಿರುವ ಸ್ಥಾನಕ್ಕೆ ಚುನಾವಣಾ ಆಯೋಗ ಜೂನ್ 03ರಂದು ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ ನಡೆಸಲು ಅಧಿಸೂಚನೆ ಪ್ರಕಟಿಸಿದೆ. ಈ ಚುನಾವಣೆಗೆ ಪ್ರಾದೇಶಿಕ ಆಯುಕ್ತರು ಚುನಾವಣಾಧಿಕಾರಿಗಳಾಗಿದ್ದು. ಕ್ಷೇತ್ರದ ವ್ಯಾಪ್ತಿಯ ಜಿಲ್ಲಾಧಿಕಾರಿಗಳು ಸಹಾಯಕ ಚುನಾವಣಾಧಿಕಾರಿಗಳಾಗಿ ಕಾರ್ಯನಿರ್ವಹಿಸಲಿದ್ದಾರೆ.

ಈ ಚುನಾವಣೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರ ಅಧ್ಯಕ್ಷತೆಯಲ್ಲಿ ಪೂರ್ವಸಿದ್ಧತಾ ಸಭೆಯನ್ನು ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಮಾಹಿತಿ ನೀಡಿ, ಈಗಾಗಲೇ ನಡೆದ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ರಚಿಸಲಾಗಿರುವ ವಿವಿಧ ಸಮಿತಿಗಳು, ನಿಯೋಜಿತ ಅಧಿಕಾರಿಗಳ ತಂಡಗಳ ಕಾರ್ಯ ಜೂನ್ 06ರವರೆಗೆ ವಿಧಾನ ಪರಿಷತ್ ಚುನಾವಣೆಯ ನೀತಿಸಂಹಿತೆ ಪೂರ್ಣಗೊಳ್ಳುವವರೆಗೂ ಮುಂದುವರೆಯಲಿವೆ. ಚೆಕ್‌ಪೋಸ್ಟ್‌ಗಳು, ತನಿಖಾ ತಂಡಗಳು ಎಂದಿನಂತೆ ಕಾರ್ಯನಿರ್ವಹಿಸುತ್ತಿವೆ. ಈ ಅವಧಿಯಲ್ಲಿ ಜಿಲ್ಲೆಯಲ್ಲಿ ನಡೆಯುವ ಹಣಕಾಸು ವಹಿವಾಟುಗಳ ಬಗ್ಗೆಯೂ ಸೂಕ್ಷ್ಮವಾಗಿ ಕಣ್ಣಿಡಲಾಗುವುದು ಎಂದರು.



ಈ ಚುನಾವಣೆಯೂ ಕೂಡ ಶಾಂತಿಯುತವಾಗಿ, ಮುಕ್ತ ಮತ್ತು ನ್ಯಾಯಸಮ್ಮತವಾಗಿ ನಡೆಸಲು ಜಿಲ್ಲಾಡಳಿತ ಅಗತ್ಯ ಕ್ರಮಗಳನ್ನು ಕೈಗೊಳ್ಳಲಿದೆ ಎಂದ ಅವರು, ಚಿತ್ರದುರ್ಗ ಜಿಲ್ಲೆಯಲ್ಲಿ 4615ಮತದಾರರಿದ್ದು, ಜೂನ್ 03ರಂದು ನಡೆಯುವ ಚುನಾವಣೆಯಲ್ಲಿ ಮತದಾನ ಮಾಡಲು ಅರ್ಹತೆ ಹೊಂದಿದ್ದಾರೆ ಎಂದರು. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ಅಂತಿಮ ಮತದಾರರ ಪಟ್ಟಿಯನ್ನು 2023ರ ಡಿಸೆಂಬರ್ 30ರಂದು ಪ್ರಕಟಿಸಲಾಗಿದೆ. ಪ್ರಕಟಿಸಲಾಗಿರುವ ಅಂತಿಮ ಮತದಾರರ ಪಟ್ಟಿಯಂತೆ ಜಿಲ್ಲೆಯಲ್ಲಿ 3238ಪುರುಷರು, 1377ಮಹಿಳೆಯರು ಸೇರಿದಂತೆ ಒಟ್ಟು 4615 ಶಿಕ್ಷಕ ಮತದಾರರು ಹೆಸರು ನೋಂದಾಯಿಸಿಕೊಂಡಿದ್ದಾರೆ. ಇದರಂತೆ ಮೊಳಕಾಲ್ಮೂರು ತಾಲೂಕಿನಲ್ಲಿ 210ಪುರುಷರು, 43ಮಹಿಳೆಯರು ಸೇರಿದಂತೆ ಒಟ್ಟು 253 ಶಿಕ್ಷಕ ಮತದಾರರು, ಚಳ್ಳಕೆರೆ ತಾಲೂಕಿನಲ್ಲಿ 683ಪುರುಷರು, 220ಮಹಿಳೆಯರು ಸೇರಿ ಒಟ್ಟು 903 ಶಿಕ್ಷಕರು, ಚಿತ್ರದುರ್ಗ ತಾಲೂಕಿನಲ್ಲಿ 929 ಪುರುಷರು, 590ಮಹಿಳೆಯರು ಸೇರಿ ಒಟ್ಟು 1519ಶಿಕ್ಷಕರು, ಹಿರಿಯೂರು ತಾಲೂಕಿನಲ್ಲಿ 571ಪುರುಷರು, 251 ಮಹಿಳೆಯರು ಸೇರಿ ಒಟ್ಟು 822 ಶಿಕ್ಷಕರು, ಹೊಸದುರ್ಗ ತಾಲೂಕಿನಲ್ಲಿ 499ಪುರುಷರು, 166ಮಹಿಳೆಯರು ಸೇರಿ ಒಟ್ಟು 665ಶಿಕ್ಷಕರು ಹಾಗೂ ಹೊಳಲ್ಕೆರೆ ತಾಲೂಕಿನಲ್ಲಿ 346ಪುರುಷರು, 107ಮಹಿಳೆಯರು ಸೇರಿ ಒಟ್ಟು453 ಶಿಕ್ಷಕರು ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 4615 ಶಿಕ್ಷಕರು ಮತದಾರರು ಇದ್ದಾರೆ ಎಂದರು.

ಇಂದಿನಿಂದಲೇ ನಾಮಪತ್ರ ಸಲ್ಲಿಕೆಗೆ ಅವಕಾಶ ಕಲ್ಪಿಸಲಾಗಿದೆ. ಮೇ16ರಂದು ನಾಮಪತ್ರ ಸಲ್ಲಿಕೆಗೆ ಕಡೆಯ ದಿನ. ಮೇ 17ರಂದು ನಾಮಪತ್ರಗಳ ಪರಿಶೀಲನೆ, ಮೇ 20ರಂದು ಉಮೇದುವಾರರು ತಮ್ಮ ಉಮೇದುವಾರಿಕೆ ಹಿಂಪಡೆಯಲು ಕಡೆಯ ದಿನ. ಜೂನ್ 03ರಂದು ಬೆಳಿಗ್ಗೆ 8ರಿಂದ ಸಂಜೆ 4ರವರಗೆ ಮತದಾನ ನಡೆಯಲಿದ್ದು, ಜೂನ್ 06ರಂದು ಮತ ಎಣಿಕೆ ಕಾರ್ಯ ನಡೆಯಲಿದೆ.ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಕಾರ್ತೀಕ್ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವು ಖಚಿತ: ಎನ್.ಡಿ.ಕುಮಾರ್

» ಚಿತ್ರದುರ್ಗ

ತೀವ್ರ ಕುತೂಹಲ ಕೆರಳಿಸಿರುವ ಚಿತ್ರದುರ್ಗ, ದಾವಣಗೆರೆ ಹಾಗೂ ಶಿವಮೊಗ್ಗ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಕಾಂಗ್ರೆಸ್‌ನ ಮೂವರು ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ಕಾಂಗ್ರೆಸ್‌ನ ಹಿಂದುಳಿದ ವಿಭಾಗದ ಚಿತ್ರದುರ್ಗ ಜಿಲ್ಲಾಧ್ಯಕ್ಷ ಎನ್.ಡಿ.ಕುಮಾರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಚಿತ್ರದುರ್ಗದ ಲೋಕಸಭಾ ಕ್ಷೇತ್ರದ ಬಿ.ಎನ್.ಚಂದ್ರಪ್ಪ, ಶಿವಮೊಗ್ಗದ ಗೀತಾ ಶಿವರಾಜ್ ಕುಮಾರ್ ಹಾಗೂ ದಾವಣಗೆರೆಯ ಪ್ರಭಾ ಮಲ್ಲಿಕಾರ್ಜುನ್ ಪ್ರಚಂಡ ಬಹುಮತ ಪಡೆದು ಜಯಶೀಲರಾಗಲಿದ್ದಾರೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಪಂಚಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ದೀನದಲಿತ, ಹಿಂದುಳಿದ ರೈತ, ಕೂಲಿಕಾರ್ಮಿಕರ ಹಾಗು ಅಲ್ಪಸಂಖ್ಯಾತರ ಅಭಿವೃದ್ದಿಗಾಗಿ ಶ್ರಮಿಸಿ, ಜನರ ಮೆಚ್ಚುಗೆಗೆ ಪಾತ್ರವಾಗಿದೆ. ಬಿ.ಎನ್.ಚಂದ್ರಪ್ಪರವರು ಬಡವರ ಪರವಾಗಿ ಸಾಕಷ್ಟು ಅಭಿವೃದ್ಧಿ ಕಾರ್ಯ ಮಾಡಿ ಜನನಾಯಕರಾಗಿದ್ದಾರೆ. ಗೀತಾ ಶಿವರಾಜ್ ಕುಮಾರ್, ಪ್ರಭಾ ಮಲ್ಲಿಕಾರ್ಜುನ್ ಬಿಜೆಪಿ ಅಭ್ಯರ್ಥಿಗಿಂತ ಲಕ್ಷ ಲಕ್ಷ ಅಂತರದಿಂದ ಗೆಲುವು ಸಾಧಿಸುವುದು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

### SSLC & PUC ಪರೀಕ್ಷೆಯಲ್ಲಿ ಶೇ. ೯೦ ಅಂಕಗಳಿಸಿದ ಪತ್ರಕರ್ತರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

2024ನೇ ಸಾಲಿನ SSLC & II PUC ಪರೀಕ್ಷೆಗಳಲ್ಲಿ ಶೇ. 90ಕ್ಕಿಂತ ಹೆಚ್ಚು ಅಂಕಗಳಿಸಿದ ಸಂಘದ ಸದಸ್ಯರ ಮಕ್ಕಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 18–05–2024 ಅರ್ಜಿ ಸಲ್ಲಿಸಲು ನಿಬಂಧನೆಗಳು

1) ಶೇ.90 ಮತ್ತು ಅದಕ್ಕಿಂತ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳು (ಸಂಘದ ಸದಸ್ಯರು ಮಕ್ಕಳು ಮಾತ್ರ) ಅರ್ಜಿ ಸಲ್ಲಿಸಬಹುದು.

2) ಅರ್ಜಿ ಸಲ್ಲಿಸುವ ವಿದ್ಯಾರ್ಥಿಯ ತಂದೆ/ ತಾಯಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಏಗಘಎ) ಸದಸ್ಯರಾಗಿರಬೇಕು.

3) ಸಂಘವು ನಿಗಧಿಪಡಿಸಿರುವ ನಮೂನೆಯಲ್ಲಿ ಜಿಲ್ಲಾ ಸಂಘದ ದೃಢೀಕರಣದೊಂದಿಗೆ ನಿಗಧಿತ ದಿನಾಂಕದೊಳಗೆ ಕೇಂದ್ರ ಸಂಘಕ್ಕೆ ಸಲ್ಲಿಸಬೇಕು.

4) ನಿಗಧಿತ ದಿನಾಂಕದೊಳಗೆ ಸೂಕ್ತ ದಾಖಲೆಯೊಂದಿಗೆ ಜಿಲ್ಲಾ ಸಂಘದ ಮೂಲಕ ಅರ್ಜಿ ಸಲ್ಲಿಸದೇ ಇದ್ದ ಸದಸ್ಯರ ಮಕ್ಕಳನ್ನು ಪ್ರತಿಭಾ ಪುರಸ್ಕಾರಕ್ಕೆ ಪರಿಗಣಿಸುವುದಿಲ್ಲ.

5)ವಿದ್ಯಾರ್ಥಿಯ ಅಂಕ ಪಟ್ಟಿಯ ನಕಲನ್ನು ಶಾಲಾ/ ಕಾಲೇಜಿನ ಮುಖ್ಯಸ್ಥರಿಂದ ದೃಢೀಕರಿಸಿ ಅರ್ಜಿಯ ಜೊತೆ ಲಗತ್ತಿಸುವುದು ಸೂಕ್ತ.

6)ಆಧಾರ್ ಜೆರಾಕ್ಸ್ ಮತ್ತು ಸಂಘದ ಐಡಿ ಕಾರ್ಡ್ ಜೆರಾಕ್ಸ್ ಹಾಗೂ ವಿದ್ಯಾರ್ಥಿಯ ಇತ್ತೀಚಿನ ಭಾವಚಿತ್ರವನ್ನು ಲಗತ್ತಿಸುವುದು. ಅರ್ಜಿ ಮತ್ತು ಇತರೆ ಮಾಹಿತಿಗಾಗಿ ಆಯಾ ಜಿಲ್ಲಾ ಸಂಘವನ್ನು ಸಂಪರ್ಕಿಸಿ ಪಡೆಯುವುದು. ಅಧ್ಯಕ್ಷರು/ಪ್ರಧಾನ ಕಾರ್ಯದರ್ಶಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ರಿ., (ಏಗಘಎ) ಬೆಂಗಳೂರು.

### ಪ್ರತಿಷ್ಠಿತ ಖಾಸಗಿ ಶಾಲೆಯಲ್ಲಿ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಪರಿಶಿಷ್ಟ ಜಾತಿಯ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಖಾಸಗಿ ಶಾಲೆಗಳಲ್ಲಿ 6 ನೇ ತರಗತಿ ಪ್ರವೇಶಕ್ಕಾಗಿ ಆ□□ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. 5 ನೇ ತರಗತಿಯಲ್ಲಿ ಶೇ.60 ಕ್ಕಿಂತ ಹೆಚ್ಚು ಅಂಕ ಪಡೆದು ಉತ್ತೀರ್ಣರಾಗಿರಬೇಕು. ವಿದ್ಯಾರ್ಥಿ ಕುಟುಂಬದ ವಾರ್ಷಿಕ ವರಮಾನ ರೂ. 2 ಲಕ್ಷದೊಳಗಿರಬೇಕು. ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ಪಾಸ್ ಪೋರ್ಟ್ ಸೈಜ್ ಪೋಟೋ ಹಾಗೂ ಅಂಕಪಟ್ಟಿ, ಗ್ರಾಮೀಣ ಪ್ರಮಾಣ ಪತ್ರಗಳೊಂದಿಗೆ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರ ಕಚೇರಿ, ರೂಂ.ನಂ 37. ಜಿಲ್ಲಾಡಳಿತ ಭವನ, ದಾವಣಗೆರೆ ಇಲ್ಲಿಗೆ ಖುದ್ದು ಹಾಜರಾಗಿ ಆ□□ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: ಮೇ.21 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆ ಅಥವಾ ಆಯಾ ತಾಲ್ಲೂಕುಗಳ ಸಹಾಯಕ ನಿರ್ದೇಶಕರ ಕಚೇರಿ ಸಂಪರ್ಕಿಸಲು ಜಂಟಿ ನಿರ್ದೇಶಕ ನಾಗರಾಜ.ಕೆ ತಿಳಿಸಿದ್ದಾರೆ.

### ಶ್ರೀ ಭಗಿರಥ ಜಯಂತಿ

» ದಾವಣಗೆರೆ

ಜಿಲ್ಲಾಡಳಿತ ವತಿಯಿದ ಮೇ.14 ರಂದು ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಶ್ರೀ ಭಗಿರಥ ಜಯಂತಿಯನ್ನು ನೀತಿ ಸಂಹಿತೆ ಹಿನ್ನಲೆಯಲ್ಲಿ ಸರಳ ಹಾಗೂ ಸಾಂಕೇತಿಕವಾಗಿ ಆಚರಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿಕ ಇಲಾಖೆ ಸಹಾಯಕ ನಿರ್ದೇಶಕರು

# ಮುಂಗಾರು, ಸಂಭಾವ್ಯ ಪ್ರಕೃತಿ ವಿಕೋಪ ನಿಯಂತ್ರಣ ಕ್ರಮಕ್ಕೆ ಅಧಿಕಾರಿಗಳಿಗೆ ಸೂಚನೆ: ಡಿಸಿ ಟಿ.ವೆಂಕಟೇಶ್

» ಚಿತ್ರದುರ್ಗ



ಶೀಘ್ರದಲ್ಲಿ ಮುಂಗಾರು ಆರಂಭಗೊಳ್ಳುವ ನಿರೀಕ್ಷೆ ಇದ್ದು, ಜಿಲ್ಲೆಯಲ್ಲಿ ಸಂಭಾವ್ಯ ಪ್ರಕೃತಿ ವಿಕೋಪಗಳ ನಿಯಂತ್ರಣಕ್ಕೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಸದಾ ಸನ್ನದ್ಧರಾಗಿರುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಸೂಚಿಸಿದರು.

ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಪ್ರಸಕ್ತ ಸಾಲಿನ ಮುಂಗಾರು, ಪೂರ್ವ ಮುಂಗಾರು ಮಳೆ ಅವಧಿಯ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಕಳೆದ ದಶಕಗಳಿಂದೀಚೆಗೆ ಜಿಲ್ಲೆಯಲ್ಲಿ ಸಂಭವಿಸಿರಬಹುದಾದ ಮಳೆ ಅನಾಹುತಗಳನ್ನುಗಮನದಲ್ಲಿರಿಸಿಕೊಂಡು, ವಾಡಿಕೆಗಿಂತ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾದಲ್ಲಿ ಸಂಭವಿಸಬಹುದಾದ ದುಷ್ಪರಿಣಾಮಗಳನ್ನು ಸಮರ್ಥವಾಗಿ ಎದುರಿಸಲು ಕೈಗೊಳ್ಳಬಹುದಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಸಮಗ್ರ ವರದಿಯನ್ನು ಸಿದ್ದಪಡಿಸಿ, ಅಗತ್ಯ ಕ್ರಮಗಳಿಗಾಗಿ ಜಿಲ್ಲಾಡಳಿತಕ್ಕೆ ಮಾಹಿತಿ ಸಲ್ಲಿಸುವಂತೆ ಅವರು ಸೂಚಿಸಿದರು.

ಈ ಅವಧಿಯಲ್ಲಿ ವಿಶೇಷವಾಗಿ ಕಂದಾಯ ಇಲಾಖೆ, ಲೋಕೋಪಯೋಗಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಸಣ್ಣ ಮತ್ತು ಭಾರೀ ನೀರಾವರಿ ಇಲಾಖೆ, ಸ್ಥಳೀಯ ಸಂಸ್ಥೆಗಳು ಸೇರಿದಂತೆ ವಿವಿಧ ಪ್ರಮುಖ ಇಲಾಖೆಗಳ ಅಧಿಕಾರಿಗಳು ಸಂಭಾವ್ಯ ಅವಘಡಗಳ ನಿಯಂತ್ರಣಕ್ಕೆ ಸಿದ್ಧರಿರುವಂತೆ ಸೂಚಿಸಿದರು.

ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಮಳೆಯನೀರುಸಕಾಲದಲ್ಲಿಸಮರ್ಪಕವಾಗಿ ಹರಿದುಹೋಗದೇ ಜನಸಂಚಾರ ಮತ್ತು ಜನಜೀವನ ಅಸ್ತವ್ಯಸ್ತವಾಗುವ, ಜನ–ಜಾನುವಾರು ಪ್ರಾಣಹಾನಿ ಆಗಬಹುದಾದ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಪ್ರಸ್ತುತ ಚರಂಡಿಗಳಲ್ಲಿ ತುಂಬಿರುವ ಕಸವನ್ನು ತೆರವುಗೊಳಿಸಿ, ಮಳೆ ನೀರು ಸರಾಗವಾಗಿ ಹರಿದುಹೋಗುವಂತೆ ಕ್ರಮ ಕೈಗೊಳ್ಳಬೇಕು. ಈ ಬಗ್ಗೆ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ತಕ್ಷಣದ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು.

ಈ ವಿಷಯಕ್ಕೆ ಸಂಬಂಧಿಸಿದಂತೆ ಜಿಲ್ಲಾ ಕೇಂದ್ರದಲ್ಲಿ ಎರಡು ಹಾಗೂ ಜಿಲ್ಲೆಯ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ತಲಾ ಒಂದು ಸಹಾಯವಾಣಿ ಕೇಂದ್ರವನ್ನು ಆರಂಭಿಸಲು ಆಯಾ ತಾಲೂಕುಗಳ ತಹಶೀಲ್ದಾರರಿಗೆ ಈಗಾಗಲೇ ಸೂಚನೆ ನೀಡಲಾಗಿದ್ದು, ದಿನದ 24ಗಂಟೆಯೂ ಕಾರ್ಯನಿರ್ವಹಿಸುವಂತೆ ಸೂಚಿಸಲಾಗಿದೆ. ಅಗತ್ಯವೆನಿಸಿದಲ್ಲಿ ಅವಘಡ ಸಂಭವಿಸಿದ ತಾಲೂಕುಗಳಲ್ಲಿ ತುರ್ತು ಕಾರ್ಯಾಚರಣೆ ಕೇಂದ್ರವನ್ನು ತೆರೆಯಲು ಜಿಲ್ಲಾಡಳಿತ ಸಿದ್ಧವಾಗಿದೆ ಅಲ್ಲದೆ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖಾ ಪಡೆ, ನಾಗರೀಕ ರಕ್ಷಣಾ ದಳ, ಗೃಹರಕ್ಷಕ ದಳ, ಆಪದ್‌ಮಿತ್ರ ಅಡಿಯಲ್ಲಿ ತರಬೇತಿ ಪಡೆದ ಸಮುದಾಯ ಮಟ್ಟದ ಸ್ವಯಂ ಸೇವಕರನ್ನು ಜಾಗೃತಿಗೊಳಿಸಿ ಸನ್ನದ್ಧ ಸ್ಥಿತಿಯಲ್ಲಿಡಲು, ಲಭ್ಯವಿರುವ ರಕ್ಷಣಾ ಸಲಕರಣೆ ಮಾಹಿತಿ ಕ್ರೋಢೀಕರಿಸುವುದು ಹಾಗೂ ಎಲ್ಲಾ ಸಲಕರಣೆಗಳನ್ನು ಸುಸ್ಥಿತಿಯಲ್ಲಿರುವಂತೆ ಕ್ರಮವಹಿಸಿರುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿದರು. ಕಾಳಜಿ ಕೇಂದ್ರಗಳ ಸ್ಥಾಪನೆ, ಅಗತ್ಯವೈದ್ಯಕೀಯ ಸೌಲಭ್ಯಒದಗಿಸುವುದು, ಸಂತ್ರಸ್ಥರಿಗೆ ಊಟೋಪಹಾರ, ಆರ್ಥಿಕ ನೆರವು, ಪಡಿತರ ವಿತರಣೆಗೂ ಜಿಲ್ಲಾಡಳಿತದ ವತಿಯಿಂದ ಕ್ರಮ ಕೈಗೊಳ್ಳಲಾಗುವುದು ಎಂದರು.

ಈ ಅವಧಿಯಲ್ಲಿ ಜಿಲ್ಲೆಯ ಎಲ್ಲಾ ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ವಿದ್ಯುತ್ ಸಂಪರ್ಕ ನಿರಂತರವಾಗಿರುವಂತೆ ಹಾಗೂ ಸುರಕ್ಷತಾ ಕ್ರಮಗಳನ್ನು ಅನುಸರಿಸುವಂತೆ ಸಂಬಂಧಿಸಿದ ಇಲಾಖಾ ಅಧಿಕಾರಿಗಳಿಗೆ ಸೂಚಿಸಿದ ಅವರು, ಮಳೆಗಾಲದಲ್ಲಿ ಜಿಲ್ಲೆಯ ಕೃಷಿ ಚಟುವಟಿಕೆಗಳು ಸುಗಮವಾಗಿ ನಡೆಯಲು ಅಗತ್ಯವಾಗಿರುವ ಗುಣಮಟ್ಟದ ಬಿತ್ತನೆ ಬೀಜ ಹಾಗೂ ಸಕಾಲದಲ್ಲಿ ರಸಗೊಬ್ಬರ ಪೂರೈಸಲು ದಾಸ್ತಾನು ಮಾಡಿಟ್ಟುಕೊಳ್ಳುವ ಬಗ್ಗೆಯೂ ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಗಮನಹರಿಸುವಂತೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಕಾರ್ತೀಕ್ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಬಸವ ಜಯಂತಿ: ನಗರದಲ್ಲಿ ಬೈಕ್ ರ್‍ಯಾಲಿ

» ಚಿತ್ರದುರ್ಗ




ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವೇಶ್ವರರ ಜಯಂತಿ ಅಂಗವಾಗಿ ವೀರಶೈವ ಸಮಾಜದಿಂದ ಗುರುವಾರ ನಗರದಲ್ಲಿ ಬೈಕ್ ರ್‍ಯಾಲಿ ನಡೆಯಿತು.ನೀಲಕಂಠೇಶ್ವರಸ್ವಾಮಿ ದೇವಸ್ಥಾನದಿಂದ ಹೊರಟ ಬೈಕ್ ರ್‍ಯಾಲಿ ಆನೆಬಾಗಿಲು, ದೊಡ್ಡಪೇಟೆ, ರಂಗಯ್ಯನಬಾಗಿಲು, ಮದಕರಿ ಸರ್ಕಲ್, ಗಾಯತ್ರಿ ಸರ್ಕಲ್, ಜೆ.ಸಿ.ಆರ್. ಆರ್.ಟಿ.ಓ. ಕಚೇರಿ ರಸ್ತೆ, ಕೆಳಗೋಟೆ, ಡಿ.ಸಿ.ಸರ್ಕಲ್, ಕನಕವೃತ್ತದ ಮೂಲಕ ನೀಲಕಂಠೇಶ್ವರಸ್ವಾಮಿ ದೇವಸ್ಥಾನಕ್ಕೆ ಆಗಮಿಸಿದ ಬೈಕ್ ರ್‍ಯಾಲಿ ಮುಕ್ತಾಯಗೊಂಡಿತು.ವೀರಶೈವ ಸಮಾಜದ ಅಧ್ಯಕ್ಷ ಎಸ್.ಎಂ.ಎಲ್.ತಿಪ್ಪೇಸ್ವಾಮಿ, ಸಹ ಕಾರ್ಯದರ್ಶಿ ಜಿತೇಂದ್ರ, ಪಂಚಮಸಾಲಿ ಸಮಾಜದ ಪ್ರಕಾಶ್, ವಿಶ್ವ ಹಿಂದು ಪರಿಷತ್‌ನ ರುದ್ರೇಶ್, ವೀರಶೈವ ಅರ್ಬನ್ ಸೊಸೈಟಿಯ ನಿರ್ದೇಶಕ ಸಿದ್ದವ್ವನಹಳ್ಳಿ ಪರಮೇಶ್, ಪಿಳ್ಳೆಕೇರನಹಳ್ಳಿ ಬಸವರಾಜ್, ವೀರೇಂದ್ರ, ನಗರಸಭೆ ಸದಸ್ಯರುಗಳಾದ ಕೆ.ಬಿ.ಸುರೇಶ್, ಜಯಣ್ಣ, ವೀರಶೈವ ಲಿಂಗಾಯಿತ ಯುವ ವೇದಿಕೆ ಅಧ್ಯಕ್ಷ ಹೆಚ್.ಎಂ.ಮಂಜುನಾಥ್ ಇನ್ನು ಅನೇಕರು ಬೈಕ್ ರ್‍ಯಾಲಿಯಲ್ಲಿ ಭಾಗವಹಿಸಿದ್ದರು.

ಬಸವಣ್ಣನವರ ಭಾವಚಿತ್ರವುಳ್ಳ ಕೇಸರಿ ಭಾವುಟಗಳು ಮೆರವಣಿಗೆಯಲ್ಲಿ ರಾರಾಜಿಸಿದವು.

### ಎಸ್‌ಎಸ್‌ಎಲ್‌ಸಿ: ಚಳ್ಳಕೆರೆ ತಾಲ್ಲೂಕಿಗೆ ಶೇ.75.54 ಸಾಧನೆ

» ಮೊದಲ ಪುಟದಿಂದ

ನಗರ ಮಟ್ಟದಲ್ಲಿ ವಾಸವಿ ಪ್ರೌಢಶಾಲೆ, ಹೊಂಗಿರಣ ಶಾಲೆ, ಕುವೆಂಪು, ವಾರಿಯರ್ಸ್, ಕಿತ್ತೂರು ರಾಣಿಚನ್ನಮ್ಮ ಪ್ರೌಢಶಾಲೆಗಳು ಶೇ.100 ಫಲಿತಾಂಶ ದಾಖಲಿಸಿವೆ. ಒಟ್ಟು ಈ ಬಾರಿ 4833 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ಅಪ್ಪೈಕಿ ಗಂಡು 2482, ಹೆಣ್ಣು 2351 ಅದರಲ್ಲಿ 3650 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಗಂಡು 1733, ಹೆಣ್ಣು 1917. ನಗರದ ವಾಸವಿ ಪ್ರೌಢಶಾಲೆಯ ವಿದ್ಯಾರ್ಥಿನಿ ಎಸ್.ಶ್ರೇಯ 625 ಅಂಕಕ್ಕೆ 614 ಅಂಕ ಪಡೆದು ಮೊದಲ ಸ್ಥಾನದಲ್ಲಿದ್ದಾರೆ. ಹೊಂಗಿರಣ ಶಾಲೆಯ ಟಿ.ನಂದಿನ–613, ಟಿ.ಸುಮುಖ–612 ಅಂಕ ಪಡೆದಿದ್ದಾರೆ. ಸರ್ಕಾರಿ ಪ್ರೌಢಶಾಲೆಯಲ್ಲಿ ಆದರ್ಶ ವಿದ್ಯಾಲಯದ ಶ್ರೇಯಶ್ರೀ–597 ಅಂಕ, ಬೆಳಗೆರೆ ನಾರಾಯಣಪುರದ ಸೀತಾರಾಮಪ್ರೌಢಶಾಲೆಯ ವಿದ್ಯಾರ್ಥಿ ಜಗದೀಶ್–605 ಅಂಕ ಪಡೆದಿದ್ದಾರೆ. ಉತ್ತಮ ಫಲಿತಾಂಶ ಪಡೆಯಲು ಹಗಲಿರುಳಿ ಶ್ರಮಿಸಿದ ತಾಲ್ಲೂಕಿ ಎಲ್ಲಾ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರು, ಶಿಕ್ಷಕರು, ವಿಷಯ ಪರಿವೀಕ್ಷಕರು, ಸಿಬ್ಬಂದಿ ವರ್ಗ, ಪೋಷಕರು ಹಾಗೂ ವಿದ್ಯಾರ್ಥಿಗಳನ್ನು ಶಿಕ್ಷಣ ಇಲಾಖೆ ಪರವಾಗಿ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಅಭಿನಂದಿಸಿದರು.

### ಜೆ.ಸಿ.ಆರ್.ನಾಲ್ಕನೆ ಕ್ರಾಸ್‌ನಲ್ಲಿ ಮರದ ದೊಡ್ಡ ಕೊಂಬೆ ಮುರಿದು ಬಿದ್ದಿರುವುದು



ಚಿತ್ರದುರ್ಗ : ಜೆ.ಸಿ.ಆರ್. ನಾಲ್ಕನೆ ಕ್ರಾಸ್‌ನಲ್ಲಿ ಬುಧವಾರ ಸಂಜೆ ಮರದ ದೊಡ್ಡ ಕೊಂಬೆಯೊಂದು ಮುರಿದು ಬಿದ್ದಿದ್ದು, ಗುರುವಾರದವರೆಗೂ ಅಲ್ಲಿಯೇ ಇತ್ತು ಯಾರು ತೆವುಗೊಳಿಸಿರಲಿಲ್ಲ. ಜಿ ಸೆವೆನ್ ಮಾರ್ಟ್ ಪಕ್ಕದ ರಸ್ತೆಯಲ್ಲಿರುವ ಮರಳುಸಿದ್ದೇಶ್ವರ ಮನೆಯ ಮುಂಭಾಗದಲ್ಲಿರುವ ಬೃಹದಾಕಾರವಾದ ಮರದ ಕೊಂಬೆ ಗಾಳಿಗೆ ಮುರಿದು ಬಿದ್ದ ಸಂದರ್ಭದಲ್ಲಿ ಅಲ್ಲಿ ಯಾರು ಇಲ್ಲದ ಕಾರಣ ಯಾವುದೇ ಸಾವು–ನೋವು ಸಂಭವಿಸಿಲ್ಲ. ಅಕ್ಕಪಕ್ಕದವರು ನಗರಸಭೆಯವರಿಗೆ ಮಾಹಿತಿ ನೀಡಿದ್ದರೂ ತೆರವುಗೊಳಿಸುವ ಕೆಲಸವಾಗಿಲ್ಲ. ದ್ವಿಚಕ್ರ ವಾಹನೊಂದು ಬಿಟ್ಟರೆ ಬೇರೆ ಯಾವ ವಾಹನವೂ ಸಂಚರಿಸಲು ಜಾಗವಿಲ್ಲ. ದಿನವಿಡಿ ರಸ್ತೆ ಬಂದ್ ಆಗಿತ್ತು. ನಮ್ಮ ಮನವಿಗೆ ಯಾರೂ ಸ್ಪಂದಿಸುತ್ತಿಲ್ಲ ಎಂದು ಅಲ್ಲಿನ ನಿವಾಸಿಗಳು ಸಂಕಷ್ಟ ತೋಡಿಕೊಂಡರು.

# ನಗರದ ನರಹರೇಶ್ವರ ದೇವಾಲಯ ಆವರಣದಲ್ಲಿ ನೂತನ ವಿಗ್ರಹಗಳ ಪ್ರತಿಷ್ಠಾಪನೆ : ವೈ.ರಾಜರಾಂ

**ಚಳ್ಳಕೆರೆ:** ತಾಲ್ಲೂಕಿನ ನಗರಂಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನರಹರಿ ನಗರದ ನರಹರೇಶ್ವರ ದೇವಸ್ಥಾನದ ಪ್ರಾಂಗಣದಲ್ಲಿ ಶ್ರೀನರಹರಿ ಸೇವಾಪ್ರತಿಷ್ಠಾನದ ವತಿಯಿಂದ ಲಕ್ಷ್ಮಿನೃಸಿಂಹ, ಸಿಂಹಾದ್ರಿ ಮತ್ತು ನಾಗವೇಣಮ್ಮನವರ ವಿಗ್ರಹ ಪ್ರತಿಷ್ಠಾಪನೆ ಹಾಗೂ ಧಾರ್ಮಿಕ ಸಭಾ ಕಾರ್ಯಕ್ರಮಗಳು ನಡೆಯಲಿವೆ ಎಂದು ನರಹರಿ ಸದ್ಗುರುಪೀಠಾಧ್ಯಕ್ಷ ವೈ.ರಾಜರಾಂ ತಿಳಿಸಿದ್ದಾರೆ. ಅವರು ಈ ಬಗ್ಗೆ ಮಾಹಿತಿ ನೀಡಿ, ಕಳೆದ ಹಲವಾರು ವರ್ಷಗಳಿಂದ ಭಕ್ತರ ಅಪೇಕ್ಷೆ ಹಾಗೂ ನಿಶ್ಚಯದಂತೆ ಈ ಕಾರ್ಯಕ್ರಮ ನಡೆಸಲಾಗುತ್ತಿದೆ. ಮೇ.11ರ ಶನಿವಾರ ಸಂಜೆ 4.30ಕ್ಕೆ ಚಳ್ಳಕೆರೆ ನಗರದ ವೀರಭದ್ರಸ್ವಾಮಿ ದೇವಸ್ಥಾನದಿಂದ ನರಹರೇಶ್ವರ ದೇವಸ್ಥಾನದ ತನಕ ಪ್ರತಿಷ್ಠಾಪನೆಗೊಳ್ಳಲಿರುವ ವಿಗ್ರಹಗಳ ಬೃಹತ್ ಮೆರವಣಿಗೆ ನಡೆಸಲಾಗುವುದು. ಅಂದು ಸಂಜೆ 6.30ಕ್ಕೆ ಸಿಂಹಾದ್ರಿ ಸಭಾಮಂಟಪದಲ್ಲಿ ಭಜನೆ, ಪ್ರವಚನೆ ಕಾರ್ಯಕ್ರಮವಿರುತ್ತದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವೈ.ಶಾಂತರಾಮ್‌ಸ್ವಾಮಿ ವಹಿಸಲಿದ್ದು, ದಿವ್ಯಸಾನಿಧ್ಯವನ್ನು ಚಿತ್ರದುರ್ಗ ಕಬೀರಾನಂದಾಶ್ರಮಶ್ರೀಶಿವಲಿಂಗಾನಂದಸ್ವಾಮಿ,ಚಳ್ಳಕೆರೆಯಶಾರದಾಶ್ರಮದ ಮಾತಾಯಿ ತ್ಯಾಗಮಯಿ ಉಪಸ್ಥಿತರಿರುವರು. ಮೇ.12ರ ಭಾನುವಾರ ಬೆಳಗ್ಗೆ ಸುಪ್ರಭಾತದೊಂದಿಗೆ ಕಾರ್ಯಕ್ರಮ ಆರಂಭವಾಗಲಿದೆ, 8ಕ್ಕೆ ನವಗ್ರಹ ಹೋಮ ಹಾಗೂ ಸಾಮೂಹಿಕ ಗುರುನಾಮ ಹೋಮ ನಡೆಯಲಿದೆ. 10ಕ್ಕೆ ಭೂಮಿಪೂಜೆ ಹಾಗೂ ವಿಗ್ರಹಗಳ ಅನಾವರಣ ಕಾರ್ಯಕ್ರಮ ನಡೆಯಲಿದೆ. 11ಕ್ಕೆ ಸಭಾ ಕಾರ್ಯಕ್ರಮ, ಆಶ್ರಮದಲ್ಲಿ ಹಮ್ಮಿಕೊಂಡಿರುವ ಧಾರ್ಮಿಕ ಕಾರ್ಯಕ್ರಮಗಳಿಗೆ ಹೆಚ್ಚಿನ ಭಕ್ತರು ಆಗಮಿಸುವಂತೆ ನರಹರಿಪ್ರತಿಷ್ಠಾನದ ಜಂಟಿ ಕಾರ್ಯದರ್ಶಿ ಬಿ.ಸಿ.ಸಂಜೀವಮೂರ್ತಿ, ಎನ್.ಪದ್ಮನಾಭ್, ಸಿ.ಕೆ.ಸುದರ್ಶನ, ಎನ್.ಪುರುಷೋತ್ತಮ ಮನವಿ ಮಾಡಿದ್ದಾರೆ.

## ಪ್ರಮುಖ ಸುದ್ದಿ

### 82928 ರೈತರಿಗೆ ಒಟ್ಟು ರೂ.60.23 ಕೋಟಿ ಮೊದಲ ಹಾಗೂ ಎರಡನೇ ಕಂತಿನಲ್ಲಿ ಪಾವತಿ: ಜಿಲ್ಲಾಧಿಕಾರಿ

# ರೈತರಿಗೆ 2023 ರ ಮುಂಗಾರು ಬೆಳೆ ನಷ್ಟ ಪರಿಹಾರ ಬಿಡುಗಡೆ

» ದಾವಣಗೆರೆ

ಕಳೆದ ವರ್ಷ 2023 ರ ಮುಂಗಾರು ಹಂಗಾಮಿನಲ್ಲಿ ತೀವ್ರ ಮಳೆ ಕೊರತೆಯಿಂದ ಬೆಳೆ ನಷ್ಟವಾದ 82928 ರೈತರಿಗೆ ಮೊದಲ ಕಂತಿನಲ್ಲಿ ಗರಿಷ್ಠ ರೂ.2000 ವರೆಗೆ ಹಾಗೂ ಈಗ, ಬಾಕಿ ಇದ್ದ ರೈತರಿಗೆ ಒಟ್ಟು ರೂ.60,23,46,380 ಗಳನ್ನು ನೇರವಾಗಿ ರೈತರ ಖಾತೆಗೆ ಪಾವತಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ ಎಂ.ವಿ ತಿಳಿಸಿದ್ದಾರೆ.

2023 ರ ಮುಂಗಾರು ಹಂಗಾಮಿನಲ್ಲಿ ದಾವಣಗೆರೆ ಜಿಲ್ಲೆಯಲ್ಲಿ 1,50,621.7 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿ ಸಂಭವಿಸಿದೆ ಎಂದು ಸರ್ಕಾರಕ್ಕೆ ವರದಿ ನೀಡಲಾಗಿತ್ತು. ಎ□□ಡಿಆರ್ ಎಫ್ ಹಾಗೂ ಎ□□ಡಿಆ□□ಎಫ್ ಮಾರ್ಗಸೂಚಿನ್ವಯ ಅರ್ಹರ ರೈತರಿಗೆ ಗರಿಷ್ಠ ರೂ.2000 ವರೆಗೆ 82928 ರೈತರಿಗೆ ರೂ.15,88,15,380 ಗಳನ್ನು ಮೊದಲ ಕಂತಾಗಿ ಪಾವತಿಸಲಾಗಿತ್ತು.

ಮೇ.2 ರ ಸರ್ಕಾರದ ಆದೇಶದಂತೆ ಮಾರ್ಗಸೂಚಿನ್ವಯ ಪರಿಹಾರ ನೀಡಲು ಬಾಕಿ ಇದ್ದ ಮೊತ್ತವನ್ನು ಈಗ ಜಿಲ್ಲೆಯ 69575 ರೈತರಿಗೆ ರೂ.44,35,31,000 ಗಳನ್ನು ನೇರವಾಗಿ ರೈತರ ಖಾತೆಗೆ ಪಾವತಿ ಮಾಡಲಾಗಿದೆ. ಒಟ್ಟಾರೆ ಜಿಲ್ಲೆಯಲ್ಲಿ ಇದುವರೆಗೆ ರೂ.60,23,46,381 ಗಳನ್ನು ಬೆಳೆ ಹಾನಿ ಪರಿಹಾರವಾಗಿ ನೀಡಲಾಗಿರುತ್ತದೆ.

**ಮೊದಲ ಕಂತಿನ ವಿವರ:** ಮೊದಲ ಕಂತಿನಲ್ಲಿ ಗರಿಷ್ಠ ರೂ.2000 ವರೆಗೆ ಮಾರ್ಗಸೂಚಿನ್ವಯ ಜಿಲ್ಲೆಯ 82928 ರೈತರಿಗೆ ರೂ.15,88,15,380 ಗಳನ್ನು ಪಾವತಿಸಲಾಗಿತ್ತು.

ತಾಲ್ಲೂಕುವಾರು ವಿವರದನ್ವಯ



ಚನ್ನಗಿರಿ ತಾಲ್ಲೂಕಿನ 16398 ರೈತರಿಗೆ ರೂ.3,07,12,576, ದಾವಣಗೆರೆ 17015 ರೈತರಿಗೆ ರೂ.3,22,94,548, ಹೊನ್ನಾಳಿ 8795 ರೈತರಿಗೆ ರೂ.1,66,55,292, ಜಗಳೂರು 27263 ರೈತರಿಗೆ ರೂ.5,36,64,034, ನ್ಯಾಮತಿ 9189 ರೈತರಿಗೆ ರೂ.1,74,61,001, ಹಾಗೂ ಹರಿಹರ ತಾಲ್ಲೂಕಿನ 4268 ರೈತರಿಗೆ ರೂ.80,27,929 ಗಳನ್ನು ಮೊದಲ ಕಂತಾಗಿ ಪಾವತಿಸಲಾಗಿದೆ.

**ಬಾಕಿ ಇದ್ದ ಬೆಳೆ ಪರಿಹಾರ ಪಾವತಿ:** ಜಿಲ್ಲೆಯಲ್ಲಿ ಬೆಳೆ ನಷ್ಟವಾದ ರೈತರಿಗೆ ಮೊದಲ ಕಂತಿನಲ್ಲಿ ಈಗಾಗಲೇ ಗರಿಷ್ಠ ರೂ.2000 ವರೆಗೆ ಪಾವತಿಸಲಾಗಿದ್ದು, ಬಾಕಿ ಪಾವತಿಸಬೇಕಾದ 69575 ರೈತರಿಗೆ ರೂ.44,35,37,000 ಪರಿಹಾರವನ್ನು ನೇರವಾಗಿ ಅವರ ಖಾತೆಗೆ ಈಗ ಪಾವತಿಸಲಾಗಿದೆ. ತಾಲ್ಲೂಕುವಾರು ವಿವರದನ್ವಯ: ಚನ್ನಗಿರಿ 12758 ರೈತರಿಗೆ ರೂ.6,50,30,311, ದಾವಣಗೆರೆ 13914 ರೈತರಿಗೆ ರೂ.8,34,19,466, ಹೊನ್ನಾಳಿ 7177 ರೈತರಿಗೆ ರೂ.3,87,43,550, ಜಗಳೂರು 24493 ರೈತರಿಗೆ ರೂ. 19,29,18,592, ನ್ಯಾಮತಿಯ 8025 ರೈತರಿಗೆ ರೂ.4,58,94,470, ಹಾಗೂ ಹರಿಹರ ತಾಲೂಕಿನ 3208 ರೈತರಿಗೆ ರೂ.1,75,24,611 ಗಳನ್ನು ಈಗ ಪಾವತಿಸಿದೆ.

ಯಾವುದೇ ರೈತರಿಗೆ ಬೆಳೆ ಪರಿಹಾರ ಕುರಿತಂತೆ ಮಾಹಿತಿ ಮತ್ತು ಮಾರ್ಗಸೂಚಿ ಬಗ್ಗೆ ವಿವರ ನೀಡಲು ಎಲ್ಲಾ ತಾಲ್ಲೂಕುಗಳಲ್ಲಿ ಸಹಾಯವಾಣಿ ಸ್ಥಾಪಿಸಲಾಗಿದೆ. ಮಾಹಿತಿಗಾಗಿ ಬೆಳಿಗ್ಗೆ 10 ರಿಂದ ಸಂಜೆ 5.30ರವರೆಗೆ ಕರೆ ಮಾಡಬಹುದಾಗಿದೆ.

ಸಹಾಯವಾಣಿ ಸಂಖ್ಯೆಗಳು: ಚನ್ನಗಿರಿ.ತಾ. ಮೊ.ಸಂ:7892481962, ದಾವಣಗೆರೆ, ಮೊ.ಸಂ:9731254380, ಹೊನ್ನಾಳಿ.ತಾ. ಮೊ.ಸಂ:9686136015, ಜಗಳೂರ.ತಾ. ಮೊ.ಸಂ:8431977870, ನ್ಯಾಮತಿ.ತಾ. ಮೊ.ಸಂ:8073951245, ಹರಿಹರ.ತಾ.ಮೊ.ಸಂ:8618868370 ಸಂಪರ್ಕಿಸಬಹುದು.

# ಭಕ್ತಿ, ಆವೇಶದ ದುರ್ಗಮ್ಮ ಸಿಡಿ ಉತ್ಸವ

» **ಹೊಸದುರ್ಗ**

ಪಟ್ಟಣದ ಗ್ರಾಮ ದೇವತೆಯಾದ ದುರ್ಗಾಂಭಿಕ ದೇವತೆಯ ಸಿಡಿಬಂಡಿ ಉತ್ಸವ ಬುಧವಾರ ,ಸಂಜೆ ವಿಜೃಂಭಣೆಯಿಂದ ಸಾವಿರಾರು ಭಕ್ತರ ಸಮ್ಮುಖದಲ್ಲಿ ಜರುಗಿತು.

ಪಟ್ಟಣಸೇರಿದಂತೆಅಕ್ಕಪಕ್ಕದಹಳ್ಳಿಗಳಿಂದ ಆಗಮಿಸಿದ್ದ ಭಕ್ತರು ಶ್ರದ್ದೆ ಭಕ್ತಿಯಿಂಂದ ಉತ್ಸವಕ್ಕೆ ಸಾಕ್ಷಿಯಾದರು.ನೂಕು ನುಗ್ಗಲು ಹಾಗೂ ಹರ್ಷೋದ್ಗಾರಗಳ ನಡುವೆಯೇ ದೇವಿಯ ದರ್ಶನ ಪಡೆದರು. ದೇವಾಲಯದ ಸುತ್ತಮುತ್ತಲಿನ ರಸ್ತೆಗಳು ಹೆಜ್ಜೆ ಇಡಲು ಜಾಗವಿರದಷ್ಟು ಭಕ್ತರಿಂದ ಕಿಕ್ಕಿರಿದಿದ್ದವು. ಕಟ್ಟಡಗಳು, ಮರಗಳ ಮೇಲೂ ನಿಂತು ಭಕ್ತರು ಸಿಡಿಬಂಡಿಗೆ ಭಕ್ತಿಯಿಂದ ಕೈಮುಗಿದರು.

ಮದ್ಯಾಹ್ನ ನಾಲ್ಕು ಗಂಟೆಯಿಂದಲೇ ಪಟ್ಟಣದ ಎಲ್ಲಾ ರಸ್ತೆಗಳಲ್ಲೂ ದುರ್ಗಮ್ಮನ ಭಕ್ತರು ದೊಡ್ಡ ಹೂ ಮಾಲೆ, ಮಂಗಳ ವಾದ್ಯಗಳೊಂದಿಗೆ ಮೆರವಣಿಗೆ ಮೂಲಕ ಸಾಗಿಬಂದಿದ್ದು ವಿಶೇಷವಾಗಿತ್ತು. ಮುಸ್ಸಂಜೆಯ ವೇಳೆಗೆ ಸಿಡಿಬಂಡಿ ಚಲಿಸಲು ಆರಂಭಿಸುತ್ತಿದ್ದಂತೆ ದುರ್ಗಮ್ಮನಿಗೆ ಜೈ ಘೋಷಣೆ ಎಲ್ಲೆಡೆ ಕೇಳಿ ಬಂದಿತು.

ಮೊದಲು ದುರ್ಗಮ್ಮ ದೇವತೆಯನ್ನು 3 ಬಾರಿ ಪ್ರದರ್ಶಿಣೆ ಹಾಕಿಸಿದರು. ನಂತರ



ಬಂಡೆಮ್ಮ ದೇವತೆಯನ್ನು 9 ಬಾರಿ ಪ್ರದರ್ಶಿಣೆ ಹಾಕಿಸುತ್ತಿರುವಾಗ ಭಕ್ತರು ದುರ್ಗಮ್ಮ-ಅಮ್ಮ-ಅಮ್ಮ, ಅಂತ ಕೂಗ ತೊಡಗಿದರು.

ಬಂಡಿಯನ್ನು ಎಳೆಯಲು ಜನರು ಮುಗಿ ಬಿದ್ದರು, ಬಂಡಿ ಚಲಿಸುವುದಕ್ಕೂ ಮುನ್ನ ಭಕ್ತರು ಬಾಳೆಹಣ್ಣುಗಳನ್ನು ತೂರ ತೊಡಗಿದರು. ನಂತರ ದೇವಸ್ಥಾನವನ್ನು ಸಿಡಿಬಂಡಿ ಮೂರು ಸುತ್ತು ಹಾಕಿತು. ಪ್ರತಿ ಸುತ್ತಿನಲ್ಲೂ ಭಕ್ತರ ಘೋಷಣೆ ಮುಗಿಲು ಮುಟ್ಟಿತ್ತು. ನೈಸರ್ಗಿಕ ವಿಕೋಪ, ಸಾಂಕ್ರಮಿಕ ಕಾಯಿಲೆಯಂತ ದುರ್ಘಟನೆಗಳು ನಡೆಯದಂತೆ, ಧರೆಗೆ ಮಳೆ ಇಳಿಸು ತಾಯಿ ಎಂದು ದುರ್ಗಮ್ಮನಿಗೆ ಕೈ ಮುಗಿದರು.

ಪುಷ್ಪಾಲಂಕೃತವಾಗಿದ್ದ ಶ್ರೀ ದುರ್ಗಾ ದೇವರು ಮೋದಲು ಹನ್ನೋಂದು ಬಾರಿ ಸಿಡಿ ಸುತ್ತಲಾಯಿತು. ನಂತರ ಬಂಡೆಮ್ಮ ದೇವರು ಒಂಬತ್ತು ಭಾರಿ ಸುತ್ತಾ ಸಿಡಿ ಆಡಲಾಯಿತು.ಸಿಡಿ ಮಂಟಪದ ಸುತ್ತಲು ಕಿಕ್ಕಿರಿದು ಸೇರಿದ್ದ ಸಹಸ್ರಾರು ಭಕ್ತರು ಸಿಡಿ ಸುತ್ತುವಾಗ ಉದೋ ಉದೋ ಎನ್ನುತ್ತಾ ಬಾಳೇಹಣ್ಣುಗಳನ್ನ ದೇವರಿಗೆ ತೂರುತ್ತಾ ಭಕ್ತಿಯನ್ನ ಸಮರ್ಪಿಸಿದರು.ಭಕ್ತರ ಮನೆಯಿಂದ ಬಂದ ಎಡೆಪೂಜೆ,ಅನ್ನದ ಬಲಿ ನಂತರ ಸಿಡಿ ಉತ್ಸವ ಚಾಲನೆಗೊಂಡಿತು.ಸಿಡಿ ಮರವನ್ನು ತಳಿರು ತೋರಣಗಳಿಂದ ಬಣ್ಣ,ಬಣ್ಣದ ಹೂವಿನಿಂದ ಅಲಂಕೃತವಾಗಿತ್ತು, ಲಯಬದ್ದ ಉರುಮೆವಾದದ ತಾಳಕ್ಕೆ ತಕ್ಕಂತೆ ಸೋಮನ ಕುಣಿತ ನಡೆಯಿತು.

ಉತ್ಸವದಲ್ಲಿ ದೇವಾಲಯ ಸಮಿತಿಯ ಧರ್ಮದರ್ಶಿಗಳಾ ಅಗ್ರೋ.ಹೆಚ್.ಶಿವಣ್ಣ, ಹೊಸಹಳ್ಳಿಶಿವಣ್ಣ, ಪುರಸಭಾ ಮುಖ್ಯಾಧಿಕಾರಿ ತಿಮ್ಮಣ್ಣ ಜಿ.ವಿ. ಜನಪ್ರತಿನಿಧಿಗಳು ಪಟ್ಟಣದ ಪ್ರಮುಖರು ಸೇರಿದಂತೆ ಸುಮಾರು ನಾಲ್ಕು ಸಾವಿರಕ್ಕೂ ಅಧಿಕ ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ದೇವಿಯ ದರ್ಶನ ಪಡೆದರು. ಸಿಡಿ ಉತ್ಸವದ ಸಂಧರ್ಬದಲ್ಲಿ , ಸಿಪಿಐ ತಿಮ್ಮಣ್ಣ ನೇತೃತ್ವದಲ್ಲಿ ಪೋಲೀಸ್ ಬಿಗಿ ಬಂದೂಬಸ್ತ್ ವ್ಯವಸ್ಥೆ ಮಾಡಲಾಗಿತ್ತು.

## ಮಹಿಳೆ ಅಬಲೆಯಲ್ಲ, ಸಬಲೆ ಎಂಬುವುದನ್ನು ನಿರೂಪಿಸಲು ಸಂಘಟನೆಯಿಂದ ಸಾಧ್ಯ: ಪದ್ಮನಾಗರಾಜು

» **ಚಳ್ಳಕೆರೆ**

ಕಳೆದ ಹಲವಾರು ದಶಕಗಳಿಂದ ಕೇವಲ ಮನೆಯಲ್ಲಿ ಅಡುಗೆ ಮಾಡಿಕೊಂಡು ತನ್ನ ಬದುಕು ಕಂಡುಕೊಂಡಿದ್ದ ಮಹಿಳೆ ಇಂದು ಆಧುನಿಕತೆಯನ್ನು ರೂಢಿಸಿಕೊಂಡು ಸಮಾಜದ ಎಲ್ಲಾ ಕೆಲಸ ಕಾರ್ಯಗಳಲ್ಲೂ ತನ್ನ ದಕ್ಷತೆ, ಪ್ರಾಮಾಣಿಕತೆ ರೂಪಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾಳೆ. ಪ್ರತಿಯೊಬ್ಬ ಮಹಿಳೆಯೂ ಸ್ವಾವಲಂಬಿ ಬದುಕು ರೂಪಿಸಿಕೊಳ್ಳುವತ್ತ ಹೆಜ್ಜೆ ಇಡಬೇಕೆಂದು ತಾಲ್ಲೂಕು ವೀರಶೈವ ಮಹಿಳಾ ಸಂಘದ ಅಧ್ಯಕ್ಷೆ ಪದ್ಮನಾಗರಾಜು ತಿಳಿಸಿದರು.

ಅವರು, ಗುರುವಾರ ವೀರಶೈವ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ ಬಸವಜಯಂತಿ ಹಿನ್ನೆಲೆ ಮಹಿಳಾ ಮತ್ತು ಮಕ್ಕಳ



ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ವೀರಶೈವ ಮಹಿಳಾ ಸಂಘ ತನ್ನ ಸಂಘಟನೆಯಲ್ಲಿ ಎಂದೂ ಹಿಂದೆ ಬಿದಿದ್ದಲ್ಲವೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಮಹಿಳಾ ಸೇವಾ ಸಮಾಜ ಸಂಘದ ಕಾರ್ಯದರ್ಶಿ ಮಂಜುಳಾ ಕೆ.ಸಿ.ನಾಗರಾಜು ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ವೀರಶೈವ ಮಹಿಳಾ ಸಂಘ ವಿವಿಧ ಕಾರ್ಯಕ್ರಮ ಆಯೋಜಿಸುವ ಮೂಲಕ ಮಹಿಳೆಯರಿಗೆ ಆತ್ಮಶಕ್ತಿ ತುಂಬುವಲ್ಲಿ ಯಶಸ್ವಿಯಾಗಿದೆ. ಮಹಿಳಾ ಸಂಘ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಿದ್ದು, ತಾಲ್ಲೂಕಿನ ವೀರಶೈವ ಸಮಾಜದ ಮಹಿಳೆಯರು ಮಹಿಳಾ ಸಂಘದ ಸದಸ್ಯತ್ವನ್ನು ಪಡೆದು ಕಾರ್ಯಚಟುವಟಿಕೆಯಲ್ಲಿ ಭಾಗವಹಿಸಬೇಕು. ನಮ್ಮ ಶಕ್ತಿ ಹೆಚ್ಚಾದಂತೆಲ್ಲಾ ನಮ್ಮಲ್ಲಿ ಜಾಗೃತಿ ಮೂಡಿಲಿದೆ ಎಂದರು.

ಇದೇ ಸಂದರ್ಭದಲ್ಲಿ ಮೇಲ್ಚಾವಣೆ ದಾಣಿಗಳಾದ ನೇತ್ರ ಕೆಜಿಟಿ ಸುರೇಶ್‌ರವರನ್ನು ಅಭಿನಂದಿಸಿದರು. ಮಹಿಳಾ ಕಾರ್ಯಚಟುವಟಿಕೆ ಮತ್ತು ಅದರ ಮಹತ್ವವನ್ನು ಕುರಿತು ಉಪನ್ಯಾಸಕಿ ಸುಮತಿಜಯಪ್ಪ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಪಾರ್ವತಮ್ಮ ಮಂಡಿಮಠ, ಸುನಿತಾಬಸವರಾಜು, ಎಂ.ಸಾವಿತ್ರಮ್ಮ, ಕೆ.ಎಂ. ನಟರಾಜ್, ಕಿರಣ್‌ಶಂಕರ್, ಎನ್. ಸತೀಶ್‌ಬಾಬು,ಎಸ್.ಜಯಪ್ರಕಾಶ್, ಮುಂತಾದವರು ಭಾಗವಹಿಸಿದ್ದರು.

## ಮಹಿಳೆ ಸಾವಿಗೆ ಪ್ರೇರೇಪಣೆ: ನೇಣು ಹಾಕಿಕೊಂಡು ಸಾವು

### ಪತಿ ಸೇರಿ ಮೂವರ ಮೇಲೆ ಪ್ರಕರಣ

» **ಹೊಸದುರ್ಗ**

ಮಹಿಳೆಯೋರ್ವಳ ಸಾವಿಗೆ ಪ್ರೇರೇಪಣೆ ನೀಡಿದ್ದ ಹಿನ್ನೆಲೆಯಲ್ಲಿ ಮಹಿಳೆಯೋರ್ವಳು ತನ್ನ ಮನೆಯಲ್ಲಿ ನೇಣು ಹಾಕಿಕೋಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಪಟ್ಟಣದ ಕಪ್ಪಗೆರೆ ರಸ್ತೆಯಲ್ಲಿ ಬುಧವಾರ ಸಂಭವಿಸಿದ್ದು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮೃತಳ ಪತಿ ಮಾವ ಹಾಗೂ ಅತ್ತೆಯ ಮೇಲೆ ಪ್ರಕರಣ ದಾಖಲಾಗಿದೆ.

ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಮಹಿಳೆಯನ್ನು ಪಟ್ಟಣದ ಪ್ರಭುಕುಮಾರ ಎಂಬುವವರ ಪತ್ನಿ ಗೀತಾಶ್ರೀ (32) ಎಂದು ತಿಳಿದು ಬಂದಿದ್ದು ಗೀತಾಶ್ರೀ ಸಾವಿಗೆ ಆಕೆಯ ಪತಿ ಪ್ರಭುಕುಮಾರ, ಪ್ರಭುಕುಮಾರನ ತಂದೆ ಮಹೇಶ್ವರಾಧ್ಯ ಹಾಗೂ ಪ್ರಭುಕುಮಾರನ ತಾಯಿ ಸಿದ್ದಮ್ಮ ಎಂಬುವವರ ಮೇಲೆ ಪ್ರಕರಣ ದಾಖಲಾಗಿದ್ದು ಆರೋಪಿಗಳು ತಲೆ ಮರೆಸಿಕೊಂಡಿದ್ದು ಆರೋಪಿಗಳ ಪತ್ತೆಗೆ ಪೋಲೀಸರು ಪತ್ತೆಯ ಕಾರ್ಯದಲ್ಲಿ ತೊಡಗಿದ್ದು ಈ ಬಗ್ಗೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಫಾಸ್ಟ್ ನ್ಯೂಸ್

### ಡಿಪ್ಲೋಮಾ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

» **ದಾವಣಗೆರೆ**

2024-25 ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಲ್ಯಾಟರ[illegible]ಎಂಟ್ರಿ ಮುಖಾಂತರ ನೇರವಾಗಿ 2 ನೇ ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ್ ಪ್ರವೇಶಕ್ಕಾಗಿ 27 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2500/- ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಆಯ್ಕೆಯಾದ ಪುರುಷ ಅಭ್ಯರ್ಥಿಗಳಿಗೆ ಆಯಾ ಐ.ಐ.ಹೆಚ್.ಟಿ ನಿಯಮಾನುಸಾರ ಕಲ್ಪಿಸಲಾಗುವುದು. ಅರ್ಜಿ ಸಲ್ಲಿಸಲು ಮೇ.31 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಈ ಕಚೇರಿಯ ದೂರವಾಣಿ ಸಂಖ್ಯೆ 08192-262362ಯನ್ನು ಸಂಪರ್ಕಿಸಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ - ಬೆಟಗೇರಿ - 587 102, (ಕರ್ನಾಟಕ) ಇವರಿಗೆ ನೇರವಾಗಿ ಸಲ್ಲಿಸಬೇಕು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

### ಮೇ 12 ರಂದು ಚೆಸ್ ಚಾಂಪಿಯನ್‌ಶಿಪ್ ಸ್ಪರ್ಧೆ



» **ದಾವಣಗೆರೆ**

ನ್ಯೂ ದಾವಣಗೆರೆ ಡಿಸ್ಟ್ರಿಕ್ಟ್ ಚೆಸ್ ಅಸೋಸಿಯೇಷನ್ ಸಹಯೋಗದಲ್ಲಿ ದಾವಣಗೆರೆ ಜಿಲ್ಲಾ ಚೆಸ್ ಚಾಂಪಿಯನ್‌ಶಿಪ್-2024 ನ್ನು ಮೇ 12 ರಂದು ಇಲ್ಲಿನ ಪ್ರವಾಸಿ ಮಂದಿರ ರಸ್ತೆಯ ಸೀತಮ್ಮ ಕಾಲೇಜು ಎದುರಿನಲ್ಲಿರುವ ರೋಟರಿ ಬಾಲಭವನದಲ್ಲಿ ಆಯೋಜಿಸಲಾಗಿದೆ. ಮುಖ್ಯ ತೀರ್ಪುಗಾರರಾಗಿ ಕೆ.ವಿ.ಶ್ರೀಪಾದ್, ಫಿಡೆ ಆರ್ಬಿಟರ್, ಅಸೋಸಿಯೇಷನ್ ಕಾರ್ಯದರ್ಶಿ ಶ್ರೀಪಾದ ಸಿ.ಹೆಗಡೆ ಪಾಲ್ಗೊಳ್ಳುವರು. 7 ವರ್ಷ, 9, 11, 13, 15, 17, 19 ವರ್ಷದೊಳಗಿನವರ ವಿಭಾಗಗಳಲ್ಲಿ ಸ್ಪರ್ಧೆಗಳು ನಡೆಯಲಿವೆ.






# ಮಾಡೋದಾದ್ರೆ ಫೈನಾನ್ಸ್‌ನಲ್ಲಿ ಮಾಡುವುದು ಹೆಚ್ಚು ಲಾಭಕರವಂತೆ, ಏಕೆ ಗೊತ್ತೇ?

ಪಿಯುಸಿ, ಪದವಿ ನಂತರ ಸ್ನಾತಕೋತ್ತರ ಪದವಿ (Post Graduation) ಮಾಡಲು ಹೆಚ್ಚಿನ ವಿದ್ಯಾರ್ಥಿಗಳು ಆಸಕ್ತಿ ತೋರುತ್ತಾರೆ. ಬಿಕಾಂ ಪದವೀಧರರು ಹೆಚ್ಚಾಗಿ ಹೈಯರ್ ಸ್ಟಡೀಸ್ ಅಂತಾ ಬಂದಾಗ ಎಂಬಿಎ (MBA) ಅನ್ನು ಆರಿಸಿಕೊಳ್ಳುತ್ತಾರೆ.

ಎಂಬಿಎಗೆ ಸದ್ಯ ಹೆಚ್ಚಿನ ಸ್ಕೋಪ್ ಇದೆ. ಅದರಲ್ಲೂ ಫೈನಾನ್ಸ್ ಫೀಲ್ಡ್‌ನಲ್ಲಿ ಕೆರಿಯರ್ ರೂಪಿಸಿಕೊಳ್ಳಬೇಕು ಎಂದು ಕೊಂಡಿರುವವರವರು ಎಂಬಿಎ ಇನ್ ಫೈನಾನ್ಸ್ ಕೋರ್ಸ್ ಮಾಡಿದ್ರೆ ಬೆಸ್ಟ್.

ಸಂಬಳ ಮತ್ತು ಉದ್ಯೋಗ ಎರಡರ ವಿಚಾರವಾಗಿಯೂ ಎಂಬಿಎ ಇನ್ ಫೈನಾನ್ಸ್ ಉತ್ತಮ ಎನ್ನಲಾಗಿದೆ. ಈ ವಿಶೇಷತೆಯನ್ನು ಹೊಂದಿರುವ ಪದವೀಧರರು ಹೂಡಿಕೆ ಬ್ಯಾಂಕಿಂಗ್, ಕಾರ್ಪೊರೇಟ್ ಹಣಕಾಸು, ಸಲಹಾ, ಆಸ್ತಿ ನಿರ್ವಹಣೆ, ಹಣಕಾಸು ಯೋಜನೆ, ಅಪಾಯ ನಿರ್ವಹಣೆ ಮತ್ತು ಹೆಚ್ಚಿನವುಗಳನ್ನು ಒಳಗೊಂಡಂತೆ ವಿವಿಧ ಉದ್ಯಮಗಳಲ್ಲಿ ಲಾಭದಾಯಕ ಅವಕಾಶಗಳನ್ನು ಪಡೆದುಕೊಳ್ಳಬಹುದು.


ಹಣಕಾಸು (ಫೈನಾನ್ಸ್) ವಿಷಯದಲ್ಲಿ ಪದವಿ ಪಡೆಯುವುದು ಜಾಗತಿಕ ಅವಕಾಶಗಳನ್ನು ಸಹ ಅಭ್ಯರ್ಥಿಗಳಿಗೆ ಒದಗಿಸುತ್ತದೆ. ಈ ಪದವೀಧರರು ಬಹುರಾಷ್ಟ್ರೀಯ ಸಂಸ್ಥೆಗಳಿಗೆ ಕೆಲಸ ಮಾಡಬಹುದು, ಗಡಿಯಾಚೆಗಿನ ಹಣಕಾಸು ಚಟುವಟಿಕೆಗಳಲ್ಲಿ ತೊಡಗಬಹುದು ಅಥವಾ ಅಂತರರಾಷ್ಟ್ರೀಯ ವೃತ್ತಿ ಮಾರ್ಗಗಳನ್ನು ಅನುಸರಿಸಬಹುದು.

## ಉತ್ತಮ ಸಂಬಳ

ಹೂಡಿಕೆ ಬ್ಯಾಂಕಿಂಗ್, ಕಾರ್ಪೊರೇಟ್ ಹಣಕಾಸು, ಆಸ್ತಿ ನಿರ್ವಹಣೆ ಮತ್ತು ಸಲಹಾ ಸೇರಿದಂತೆ ಹಣಕಾಸು ಉದ್ಯಮವು ಒಳ್ಳೆಯ ಪ್ಯಾಕೇಜ್‌ಗಳನ್ನು ನೀಡಲು ಹೆಸರುವಾಸಿಯಾಗಿದೆ.ಈ ವಲಯಗಳು ಉನ್ನತ ಪ್ರತಿಭೆಗಳನ್ನು ಆಕರ್ಷಿಸುತ್ತವೆ ಮತ್ತು ಅದಕ್ಕೆ ಅನುಗುಣವಾಗಿ ವೃತ್ತಿಪರರಿಗೆ ಸಂಬಳ ಸಹ ನೀಡುತ್ತದೆ. ವರದಿಗಳ ಪ್ರಕಾರ, ಒಃಂ ಫೈನಾನ್ಸ್ ಪದವೀಧರರು ಸರಾಸರಿ ವಾರ್ಷಿಕವಾಗಿ 10 ಲಕ್ಷಗಳಿಂದ 20 ಲಕ್ಷಗಳವರೆಗೆ ಪಡೆದುಕೊಳ್ಳುತ್ತಾರೆ.

## ಹಲವು ವೃತ್ತಿ ಅವಕಾಶಗಳು

ಇನ್ನು ಎಂಬಿಎ ಫೈನಾನ್ಸ್ ಮಾಡಿದವರಿಗೆ ಅದೆಷ್ಟೋ



ಕೆರಿಯರ್ ಅವಕಾಶಗಳಿವೆ. ಈ ಸಬ್‌ಜೆಕ್ಟ್‌ನಲ್ಲಿ ಮಾಸ್ಟರ್ ಡಿಗ್ರಿ ಪಡೆದ್ರೆ ಬ್ಯಾಂಕಿಂಗ್, ಫೈನಾನ್ಸಿಯಲ್ ಸರ್ವಿಸ್, ಇನ್‌ವೆಸ್ಟ್‌ಮೆಂಟ್ ಬ್ಯಾಂಕಿಂಗ್, ಇನ್‌ಶುರುನ್ಸ್ , ವೆಲ್ತ್ ಮ್ಯಾನೇಜ್‌ಮೆಂಟ್ ಕನ್‌ಸಲ್ಟಿಂಗ್ ಸೇರಿದಂತೆ ಹಲವಾರು ಸೆಕ್ಟರ್‌ಗಳಲ್ಲಿ ನೀವು ಕೆರಿಯರ್ ರೂಪಿಸಿಕೊಳ್ಳಬಹುದು.

ಇವರು ಹಣಕಾಸು ವಿಶ್ಲೇಷಕರು, ಹಣಕಾಸು ವ್ಯವಸ್ಥಾಪಕರು, ಖಜಾಂಚಿಗಳು ಅಥವಾ ಅಈಔ ಗಳಾಗಿ ಕೆಲಸ ಮಾಡಬಹುದು. ಕೆಲ ಕಂಪನಿಗಳು ವಾರ್ಷಿಕವಾಗಿ 50 ಲಕ್ಷಗಳಿಂದ 2 ಕೋಟಿ ಅಥವಾ ಅದಕ್ಕಿಂತ ಹೆಚ್ಚಿನ ಶ್ರೇಣಿಯಲ್ಲಿ ವೇತನವನ್ನು ನೀಡುತ್ತವೆ.

ಎಂಬಿಎ ಇನ್ ಫೈನಾನ್ಸ್ ಮಾಡಿದವರಿಗೆ ಉದ್ಯೋಗವಕಾಶ: ಹಲವಾರು ಸೆಕ್ಟರ್‌ಗಳಲ್ಲಿ ಇವರು ಉದ್ಯೋಗ ಪಡೆಯಬಹುದು ಅವುಗಳು ಯಾವುವುವೆಂದರೆ,

## ಇನ್‌ವೆಸ್ಟ್ ಬ್ಯಾಂಕಿಂಗ್

MBA ಹಣಕಾಸು ಪದವೀಧರರು ಹೂಡಿಕೆ (ಇನ್‌ವೆಸ್ಟ್) ಬ್ಯಾಂಕಿಂಗ್ ವಿಶ್ಲೇಷಕ, ಸಹಾಯಕ, ಉಪಾಧ್ಯಕ್ಷ ಅಥವಾ ವ್ಯವಸ್ಥಾಪಕ ನಿರ್ದೇಶಕರಂತಹ ಪಾತ್ರಗಳನ್ನು ಅನುಸರಿಸಬಹುದು.

ಈ ಸ್ಥಾನಗಳು ಹಣಕಾಸಿನ ವಿಶ್ಲೇಷಣೆ, ಮೌಲ್ಯಮಾಪನ ಮತ್ತು ವಿಲೀನಗಳು ಮತ್ತು ಸ್ವಾಧೀನಗಳ ಕಾರ್ಯಗತಗೊಳಿಸುವಿಕೆ (M&A), ಆರಂಭಿಕ ಸಾರ್ವಜನಿಕ ಕೊಡುಗೆಗಳು (ಐಪಿಓಗಳು), ಸಾಲ ಮತ್ತು ಇಕ್ವಿಟಿ ಕೊಡುಗೆಗಳು ಮತ್ತು ಇತರ ಹಣಕಾಸು ವಹಿವಾಟುಗಳನ್ನು ಒಳಗೊಂಡಿರುತ್ತದೆ.

ಹೂಡಿಕೆ ಬ್ಯಾಂಕರ್‌ಗಳು ಹಣಕಾಸಿನ ದತ್ತಾಂಶ, ಕಂಪನಿಯ ಹಣಕಾಸು ಹೇಳಿಕೆಗಳು, ಮಾರುಕಟ್ಟೆ ಪ್ರವೃತ್ತಿಗಳು ಮತ್ತು ಕಂಪನಿಗಳ ಆರ್ಥಿಕ ಆರೋಗ್ಯ ಮತ್ತು ಕಾರ್ಯಕ್ಷಮತೆಯನ್ನು ಮೌಲ್ಯಮಾಪನ ಮಾಡಲು ಉದ್ಯಮ ಸಂಶೋಧನೆಗಳನ್ನು ವಿಶ್ಲೇಷಿಸುತ್ತಾರೆ.

ಅಸೋಸಿಯೇಟ್‌ಗಳು, ಉಪಾಧ್ಯಕ್ಷರು ಮತ್ತು ನಿರ್ದೇಶಕರಂತಹ ಉನ್ನತ ಮಟ್ಟದ ಹುದ್ದೆಗಳು ಗಣನೀಯವಾಗಿ ಹೆಚ್ಚಿನ ಸಂಬಳವನ್ನು ಪಡೆಯುತ್ತಾರೆ. ಸಾಮಾನ್ಯವಾಗಿ ವರ್ಷಕ್ಕೆ 30 ಲಕ್ಷಗಳಿಂದ 1 ಕೋಟಿ ಸಂಬಳ ಪಡೆಯುತ್ತಾರೆ.

## ಕಾರ್ಪೊರೇಟ್ ಹಣಕಾಸು

ಕಾರ್ಪೊರೇಟ್ ಹಣಕಾಸು ವೃತ್ತಿಪರರು ಹಣಕಾಸಿನ ಯೋಜನೆ, ಬಜೆಟ್ ಮತ್ತು ಮುನ್ಸೂಚನೆಗೆ ಜವಾಬ್ದಾರರಾಗಿರುತ್ತಾರೆ. ಅವರು ಐತಿಹಾಸಿಕ ಮತ್ತು ಯೋಜಿತ ಹಣಕಾಸಿನ



ಡೇಟಾವನ್ನು ವಿಶ್ಲೇಷಿಸುತ್ತಾರೆ. ಇದು ಹೂಡಿಕೆಯ ಅವಕಾಶಗಳನ್ನು ಮೌಲ್ಯಮಾಪನ ಮಾಡುವುದು, ಬಂಡವಾಳ ಹಂಚಿಕೆಯನ್ನು ನಿರ್ಣಯಿಸುವುದು ಮತ್ತು ಹಣಕಾಸಿನ ಕಾರ್ಯಕ್ಷಮತೆಯನ್ನು ಮೇಲ್ವಿಚಾರಣೆ ಮಾಡುವುದು.

ಕಾರ್ಪೊರೇಟ್ ಹಣಕಾಸು ವೃತ್ತಿಪರರು ಹೂಡಿಕೆ ಯೋಜನೆಗಳನ್ನು ಮೌಲ್ಯಮಾಪನ ಮಾಡುವಲ್ಲಿ ಮತ್ತು ಅವರ ಆರ್ಥಿಕ ಕಾರ್ಯಸಾಧ್ಯತೆಯನ್ನು ನಿರ್ಧರಿಸುವಲ್ಲಿ ನಿರ್ಣಾಯಕರಾಗಿದ್ದಾರೆ.

ಬಂಡವಾಳ ವೆಚ್ಚಗಳು, ಸ್ವಾಧೀನಗಳು ಮತ್ತು ಹೊಸ ಉದ್ಯಮಗಳ ಕುರಿತು ನಿರ್ಧಾರಗಳನ್ನು ಮಾರ್ಗದರ್ಶನ ಮಾಡಲು ವಿವಿಧ ಹೂಡಿಕೆ ಅವಕಾಶಗಳಿಗೆ ಸಂಬಂಧಿಸಿದ ಸಂಭಾವ್ಯ ಆದಾಯಗಳು, ಅಪಾಯಗಳು ಮತ್ತು ನಗದು ಹರಿವುಗಳನ್ನು ವಿಶ್ಲೇಷಿಸುತ್ತಾರೆ.

## ಅಸೆಟ್ ಮ್ಯಾನೇಜ್‌ಮೆಂಟ್

ಕ್ಲೈಂಟ್‌ಗಳು ಅಥವಾ ಸಂಸ್ಥೆಗಳ ಹಣಕಾಸಿನ ಉದ್ದೇಶಗಳು ಮತ್ತು ಅಪಾಯ ಸಹಿಷ್ಣುತೆಯನ್ನು ಪೂರೈಸಲು ಹೂಡಿಕೆ ಬಂಡವಾಳಗಳನ್ನು ನಿರ್ಮಿಸಲು ಮತ್ತು ನಿರ್ವಹಿಸಲು ಆಸ್ತಿ ವ್ಯವಸ್ಥಾಪಕರು ಜವಾಬ್ದಾರರಾಗಿರುತ್ತಾರೆ.

ಆಸ್ತಿ ನಿರ್ವಾಹಕರು ಸ್ಟಾಕ್‌ಗಳು, ಬಾಂಡ್‌ಗಳು, ರಿಯಲ್ ಎಸ್ಟೇಟ್, ಸರಕುಗಳು ಮತ್ತು ಪರ್ಯಾಯ ಹೂಡಿಕೆಗಳಂತಹ ವಿವಿಧ ಆಸ್ತಿ ವರ್ಗಗಳಾದ್ಯಂತ ಹೂಡಿಕೆಗಳನ್ನು ನಿಯೋಜಿಸುತ್ತಾರೆ.

## ಉದ್ಯಮಶೀಲತೆ ಮತ್ತು ಸ್ಟಾರ್ಟ್‌ಅಪ್

ಒಃಂ ಫೈನಾನ್ಸ್ ಪದವೀಧರರು ತಮ್ಮ ಸ್ವಂತ ವ್ಯವಹಾರಗಳನ್ನು ಪ್ರಾರಂಭಿಸಲು ತಮ್ಮ ಆರ್ಥಿಕ ಕುಶಾಗ್ರಮತಿ, ಕಾರ್ಯತಂತ್ರದ ಚಿಂತನೆ ಮತ್ತು ನಾಯಕತ್ವ ಕೌಶಲ್ಯಗಳನ್ನು ಬಳಸಿಕೊಳ್ಳಬಹುದು. ಒಃಂ ಫೈನಾನ್ಸ್ ಪದವೀಧರರು ನವೀನ ವ್ಯವಹಾರ ಮಾದರಿಗಳು, ಹಣಕಾಸು ತಂತ್ರಗಳು ಮತ್ತು ಆದಾಯ-ಉತ್ಪಾದನೆಯ ಯೋಜನೆಗಳನ್ನು ಅಭಿವೃದ್ಧಿಪಡಿಸಲು ತಮ್ಮ ಹಣಕಾಸಿನ ಪರಿಣತಿಯನ್ನು ಬಳಸಬಹುದು.

ಪ್ರವೇಶ ಮಟ್ಟದ ಸ್ಟಾರ್ಟ್-ಅಪ್‌ಗಳು ವರ್ಷಕ್ಕೆ 8 ಲಕ್ಷಗಳಿಂದ 15 ಲಕ್ಷಗಳವರೆಗೆ ಗಳಿಸಬಹುದು, ಆದರೆ ಅನುಭವಿ ಸ್ಟಾರ್ಟ್-ಅಪ್‌ಗಳು ಅಥವಾ ನಾಯಕತ್ವದ ಸ್ಥಾನದಲ್ಲಿರುವವರು ವರ್ಷಕ್ಕೆ 30 ಲಕ್ಷಗಳನ್ನು ಗಳಿಸಬಹುದು.

# ವಿಧಾನ ಪರಿಷತ್ ಚುನಾವಣೆ: ನಾಮಪತ್ರ ಸಲ್ಲಿಕೆ ಆರಂಭ

» **ದಾವಣಗೆರೆ**

ಚುನಾವಣಾ ಆಯೋಗವು ವಿಧಾನ ಪರಿಷತ್ತಿನ ದ್ವೈವಾರ್ಷಿಕ ಚುನಾವಣೆಗೆ ವೇಳಾಪಟ್ಟಿ ಪ್ರಕಟಿಸಿದ್ದು ದಾವಣಗೆರೆ ಜಿಲ್ಲೆ ಎರಡು ಶಿಕ್ಷಕರ ಕ್ಷೇತ್ರ ಹಾಗೂ ಒಂದು ಪದವೀಧರರ ಕ್ಷೇತ್ರದ ವ್ಯಾಪ್ತಿಯನ್ನು ಹೊಂದಿದ್ದು ಮೇ 9 ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಡಾ.ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.

ಜೂನ್ 21 ಕ್ಕೆ ವಿಧಾನ ಪರಿಷತ್ತಿನ 3 ಪದವೀಧರರ ಹಾಗೂ 3 ಶಿಕ್ಷಕರ ಕ್ಷೇತ್ರದ ಸ್ಥಾನಗಳ ಅವಧಿ ಮುಕ್ತಾಯವಾಗುವುದರಿಂದ ದ್ವೈವಾರ್ಷಿಕ ಚುನಾವಣೆಗೆ ವೇಳಾಪಟ್ಟಿ ಪ್ರಕಟಿಸಲಾಗಿದೆ. ಮೇ 9 ರಂದು ಅಧಿಸೂಚನೆ ಪ್ರಕಟವಾಗಲಿದ್ದು ಮೇ 16 ರ ವರೆಗೆ ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನವಾಗಿರುತ್ತದೆ.

ಮೇ 17 ರಂದು ನಾಮಪತ್ರಗಳ ಪರಿಶೀಲನೆ, ಮೇ 20 ರಂದು ನಾಮಪತ್ರಗಳ ವಾಪಸ್ ಪಡೆಯಲು ಕೊನೆಯ ದಿನವಾಗಿರುತ್ತದೆ. ಜೂನ್ 3 ರಂದು ಬೆಳಗ್ಗೆ 8 ರಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಯಲಿದೆ. ಮತ ಎಣಿಕೆಯು ಜೂನ್ 6 ರಂದು ನಡೆಯಲಿದ್ದು ಜೂನ್ 12 ರವರೆಗೆ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ.



ವಿಧಾನ ಪರಿಷತ್ ಚುನಾವಣಾ ವೇಳಾಪಟ್ಟಿ ಪ್ರಕಟವಾಗಿರುವುದರಿಂದ ನೀತಿಸಂಹಿತೆ ಜಾರಿಯಲ್ಲಿರುತ್ತದೆ.

ದಾವಣಗೆರೆ ಜಿಲ್ಲೆಯಲ್ಲಿ ಒಟ್ಟು 3 ವಿಧಾನ ಪರಿಷತ್ ಸದಸ್ಯರ ಆಯ್ಕೆಗೆ ಚುನಾವಣೆ; ಕರ್ನಾಟಕ ನೈರುತ್ಯ ಪದವೀಧರರ ಕ್ಷೇತ್ರಕ್ಕೆ ಶಿವಮೊಗ್ಗ, ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಕೊಡಗು ಜಿಲ್ಲೆಗಳು ಹಾಗೂ ದಾವಣಗೆರೆ ಜಿಲ್ಲೆಯ ಚನ್ನಗಿರಿ, ಹೊನ್ನಾಳಿ, ನ್ಯಾಮತಿ ತಾಲ್ಲೂಕುಗಳು ಸೇರಲಿವೆ.

ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ವ್ಯಾಪ್ತಿ; ಚಿತ್ರದುರ್ಗ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳು ಹಾಗೂ ದಾವಣಗೆರೆ ಜಿಲ್ಲೆಯ ದಾವಣಗೆರೆ, ಹರಿಹರ, ಜಗಳೂರು ತಾಲ್ಲೂಕುಗಳು ಸೇರಲಿವೆ. ಕರ್ನಾಟಕ ನೈರುತ್ಯ ಶಿಕ್ಷಕರ ಕ್ಷೇತ್ರದ ವ್ಯಾಪ್ತಿ; ಶಿವಮೊಗ್ಗ, ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಕೊಡಗು ಜಿಲ್ಲೆಗಳು ಹಾಗೂ ದಾವಣಗೆರೆ ಜಿಲ್ಲೆಯ ಚನ್ನಗಿರಿ, ಹೊನ್ನಾಳಿ, ನ್ಯಾಮತಿ ತಾಲ್ಲೂಕುಗಳು ಈ ಕ್ಷೇತ್ರದಲ್ಲಿ ಬರಲಿವೆ.

ಆಯಾ ವಿಭಾಗದ ಪ್ರಾದೇಶಿಕ ಆಯುಕ್ತರು ಚುನಾವಣಾಧಿಕಾರಿಗಳಾಗಿದ್ದು ಆಗ್ನೇಯ ಶಿಕ್ಷಕರ ಕ್ಷೇತ್ರಕ್ಕೆ ಬೆಂಗಳೂರು ಹಾಗೂ ನೈರುತ್ಯ ಶಿಕ್ಷಕರ ಹಾಗೂ ಪದವೀಧರ ಕ್ಷೇತ್ರಕ್ಕೆ ಮೈಸೂರು ವಿಭಾಗದ ಪ್ರಾದೇಶಿಕ ಆಯುಕ್ತರು ಚುನಾವಣಾಧಿಕಾರಿಗಳಾಗಿರುತ್ತಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T